# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 172 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–01–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 172 | Title- Code: KARKAN 28269 | Chitradurga | Date: 22-01-2024 Monday | Page: 4 | Price: Rs. 2-00


# ಇಂದು ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆ



## ಪ್ರಧಾನಿ ಮೋದಿ ವೇಳಾಪಟ್ಟಿ ಇಲ್ಲಿದೆ

» ನಮ್ಮ ಜನ ಸಮಾಚಾರ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮ ಮಂದಿರದ 'ಪ್ರಾಣ ಪ್ರತಿಷ್ಠಾ' ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಸಿದ್ಧತೆಯ ಭಾಗವಾಗಿ, ಪಿಎಂ ಮೋದಿ ನೆಲದ ಮೇಲೆ ಮಲಗುವುದು ಮತ್ತು ಎಳನೀರನ್ನು ಮಾತ್ರ ಸೇವಿಸುವುದು ಸೇರಿದಂತೆ ಕಠಿಣ ದಿನಚರಿಯನ್ನು ಅಳವಡಿಸಿಕೊಂಡಿದ್ದಾರೆ. 1990ರಲ್ಲಿ ಸೋಮನಾಥದಿಂದ ರಥಯಾತ್ರೆಯಲ್ಲಿ ಬಿಜೆಪಿ ಹಿರಿಯ ನಾಯಕ ಲಾಲ್ ಕೃಷ್ಣ ಅಡ್ವಾಣಿ ಅವರೊಂದಿಗೆ ಪ್ರಧಾನಿ ಮೋದಿ ಭಾಗವಹಿಸಿದ್ದರು. ಅವರು 2020 ರಲ್ಲಿ ಅಯೋಧ್ಯೆಯಲ್ಲಿ ರಾಮ ದೇವಾಲಯದ 'ಭೂಮಿ ಪೂಜೆ' ಯ ಮೇಲ್ವಿಚಾರಣೆ ನಡೆಸಿದರು.

### ಬೆಳಿಗ್ಗೆ

| | |
|---|---|
| 10:25 | ಅಯೋಧ್ಯೆ ವಿಮಾನ ನಿಲ್ದಾಣಕ್ಕೆ ಆಗಮನ. |
| 10.45 | ಅಯೋಧ್ಯೆ ಹೆಲಿಪ್ಯಾಡ್ಗೆ ಆಗಮನ. |
| 10.55 | ರಾಮ ಜನ್ಮಭೂಮಿಗೆ ಆಗಮನ. |
| | 11 ರಿಂದ ಮಧ್ಯಾಹ್ನ 12 ರವರೆಗೆ: ಕಾಯ್ದಿರಿಸಿದ ಸಮಯ. |

### ಮಧ್ಯಾಹ್ನ

| | |
|---|---|
| 12:05 | ಪ್ರಾಣ ಪ್ರತಿಷ್ಠಾ ಆಚರಣೆಗಳ ಪ್ರಾರಂಭ. |
| 12.55 | ಪ್ರಧಾನಿ ಮೋದಿ ಅವರು ಪ್ರತಿಷ್ಠಾಪನಾ ಸಮಾರಂಭದ ಸ್ಥಳದಿಂದ ನಿರ್ಗಮಿಸಲಿದ್ದಾರೆ. |
| 01.00 | ಸಾರ್ವಜನಿಕ ಸಮಾರಂಭಕ್ಕೆ ಆಗಮನ. |
| 02.00 | ಅಯೋಧ್ಯೆಯಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಪ್ರಧಾನಿ ಮೋದಿ. |
| 2:10: | ಕುಬೇರ ಟೀಲಾಗೆ ಭೇಟಿ. |

ಮೈಸೂರು ಮೂಲದ ಶಿಲ್ಪಿ ಅರುಣ್ ಯೋಗಿರಾಜ್ ರಚಿಸಿದ 51 ಇಂಚಿನ ರಾಮ್ ಲಲ್ಲಾ ವಿಗ್ರಹವನ್ನು ಗುರುವಾರ ರಾಮ್ ಜನ್ಮಭೂಮಿ ದೇವಾಲಯದ ಗರ್ಭಗುಡಿಯಲ್ಲಿ ಸ್ಥಾಪಿಸಲಾಯಿತು.



## ಹೊಸದುರ್ಗದಲ್ಲಿ ಪ್ರತ್ಯಕ್ಷವಾದ ಶ್ರೀರಾಮನ ಪಾದುಕೆಗಳು



» ನಮ್ಮ ಜನ ಸಮಾಚಾರ

ಹೊಸದುರ್ಗ: ಶ್ರೀರಾಮ ಎಂದರೆ ಸುಮ್ಮನೆ ನಮಗೆ ಲಭಿಸಿದವನಲ್ಲ. 548 ವರ್ಷಗಳ ನಿರಂತರ ಹೋರಾಟ ಶ್ರಮದ ಪ್ರತಿಫಲವಾಗಿ ಲಕ್ಷಾಂತರ ಕರಸೇವಕರ ಬಲಿದಾನದ ತರುವಾಯ, ಇಂದು ಪ್ರಭು ಶ್ರೀ ರಾಮ ಪುನರ್ ಪ್ರಾಣ ಪ್ರತಿಷ್ಠಾಪನೆಯಾಗುತ್ತಿದೆ.

ವಿಶ್ವ ಹಿಂದೂ ಪರಿಷತ್ ನಿಂದ ರಾಮ ಜನ್ಮಭೂಮಿ ಉಳಿವಿಗಾಗಿ ನಿರಂತರ, ಹೋರಾಟಗಳು ನಡೆದು ಬಂದಿದ್ದು, ರಾಮ ರಥಾಯಾತ್ರೆ,ರಾಮ ಜ್ಯೋತಿಯಾತ್ರೆಮತ್ತುರಾಮಪಾದುಕೆ ಯಾತ್ರೆ ನಿರಂತರವಾಗಿ ನಡೆದುಕೊಂಡುಬಂದ ಪರಿಣಾಮವಾಗಿ ಇಂದು ಪ್ರಭು ಶ್ರೀರಾಮ ನಮ್ಮ ಭಕ್ತಿಗೆ ಒಲಿದಿದ್ದಾನೆ.

ಅಂದು1992 ನೇ ಇಸವಿಯ ನವಂಬರ್ 6 ನೇ ರಂದು ಶ್ರೀರಾಮ ಪಾದುಕೆ ಯಾತ್ರೆ ಸಂಜೆ ಹೊಸದುರ್ಗ ಪಟ್ಟಣ ತಲುಪಿತ್ತು. ಮುಖ್ಯ ರಸ್ತೆಯಲ್ಲಿ ಶೋಭಾಯಾತ್ರೆ ಹೋಗುವ ಸಮಯದಲ್ಲಿ ಅನಿವಾರ್ಯವಾಗಿ ಸಣ್ಣದೊಂದು ಅಚಾತುರ್ಯ ಘಟನೆ ನಡೆದು ಬಿಟ್ಟಿತು.

ಘಟನೆ ನಡೆದ ಸಂದರ್ಭದಲ್ಲಿ ರಾಮ ಪಾದುಕೆಗಳನ್ನ ಅಂದಿನ ವಿಶ್ವಹಿಂದೂ ಪರಿಷತ್ತಿನ ಆರ್.ಡಿ.ಸೀತಾರಾಂ ಶ್ರೀರಾಮ ಪಾದಕಗಳನ್ನು ತಂದು ನಗರದ ಗಾಂಧಿ ವೃತ್ತದ ವಿಠಲ ರುಕ್ಕುಮಾಯಿ ಪಾಂಡುರಂಗ ದೇವಾಲಯದಲ್ಲಿ ಇಟ್ಟು, ಪ್ರತಿದಿನ ಶಾಸ್ತ್ರೋಕ್ತವಾಗಿ ಪೂಜೆ ನೆರವೇರಿಸಲು ಅರ್ಚಕರನ್ನ ನೇಮಿಸಿದ್ದರು. ಅಯೋಧ್ಯೆಯಲ್ಲಿ ಪ್ರಭು ಶ್ರೀ ರಾಮನ ಪುನರ್ ಪ್ರಾಣ ಪ್ರತಿಷ್ಠಾಪನೆಯಾಗುತ್ತಿದೆ. ಇಂದು ಹೊಸದುರ್ಗದಲ್ಲಿ ಶ್ರೀ ರಾಮನ ಪಾದುಕೆಗಳ ಪುನರ್ ಪ್ರತಿಷ್ಠಾಪನೆ ಮಾಡಿ ಭಕ್ತರ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಶ್ರೀರಾಮನ ಪಾದುಕೆಗಳ ದರ್ಶನ ಪಡೆಯಲು, ನೂರಾರು ಸಂಖ್ಯೆಯಲ್ಲಿ ಭಕ್ತರು ಪಾಂಡುರಂಗ ದೇವಸ್ಥಾನಕ್ಕೆ ಆಗಮಿಸುತ್ತಿದ್ದಾರೆ ಎನ್ನುತ್ತಾರೆ ವಿಠಲ ಪಾಂಡುರಂಗ ಟ್ರಸ್ಟ್ ನ ಸದಸ್ಯ ಹಾಗೂ ಪುರಸಭಾ ಸದಸ್ಯ ಪ್ರಶಾಂತ್.

ಪುಟ ↘ 2

## ಡಿ.ಮಲ್ಲಾಪುರ ಸಮೀಪವಿರುವ ಶಬರಿವನಕ್ಕೆ ಪೂಜೆಗಾಗಿ ಭಕ್ತರ ದಂಡು

ಪುಟ ↘ 2


ಒಳಪುಟದ ಸುದ್ದಿಗಳು
ನಾಳೆ ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಇಲ್ಲ; ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ 2
ಸ್ವತಃ ಗೇಟ್ ಓಪನ್ ಮಾಡಿ ಶಾಂತಿಸಾಗರಕ್ಕೆ ನೀರು ಹರಿಸಿದ ಶಾಸಕ 3
ರೈತರು ಸಾಲದ ಅಸಲು ಕಟ್ಟಿದ್ದರೆ ಸಂಪೂರ್ಣ ಬಡ್ಡಿ ಮನ್ನಾ; ಸರ್ಕಾರ ಅಧಿಕೃತ ಆದೇಶ 4


ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಹೊಸದುರ್ಗದಲ್ಲಿ ಪ್ರತ್ಯಕ್ಷವಾದ ಶ್ರೀರಾಮನ



ಶ್ರೀರಾಮನ ಪಾದುಕೆಗಳ ದರ್ಶನದಿಂದ ಹೊಸದುರ್ಗ ಜನತೆ ಪುನೀತರಾಗಿದ್ದಾರೆ. ಅಯೋಧ್ಯಾಪತಿ ಪ್ರಭು ಶ್ರೀರಾಮ ಹೊಸದುರ್ಗ ತಾಲೂಕಿನಲ್ಲಿ ಸಂಚರಿಸಿ ಪಾದಸ್ಪರ್ಶಿಸಿದ ದಶರಥರಾಮೇಶ್ವರ ಮತ್ತು ಹಾಲು ರಾಮೇಶ್ವರ ಕ್ಷೇತ್ರಗಳು ಜಗತ್ಪ್ರಸಿದ್ಧಿಯಾಗಿವೆ. ಅಂತೆಯೇ, ಇಲ್ಲಿರುವ ರಾಮ ಪಾದುಕೆಗಳಿಗೆ ಮಂದಿರ ನಿರ್ಮಿಸಿ, ದೇಶದಾದ್ಯಂತ ಇರುವ ಭಕ್ತರು ಕಣ್ತುಂಬಿಕೊಳ್ಳಬೇಕೆಂಬುದೇ ನಮ್ಮ ಆಶಯ.

» **ಆರ್.ಡಿ.ಸೀತಾರಾಮ್ ರಾವ್ ವಿಶ್ವ ಹಿಂದೂ ಪರಿಷತ್ ಹಿರಿಯ ಕಾರ್ಯಕರ್ತ, ಹೊಸದುರ್ಗ**

### ನಾಳೆ ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಇಲ್ಲ; ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ

» **ನಮ್ಮ ಜನ ಸಮಾಚಾರ. ತುಮಕೂರು**

ಅಯೋಧ್ಯೆಯಲ್ಲಿ ನಾಳೆ ಜನವರಿ 22ರಂದು ರಾಮ ಮಂದಿರ ಉದ್ಘಾಟನೆ ಹಾಗೂ ರಾಮಲಲ್ಲಾ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಲಿದ್ದು, ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಮಾಡುವಂತೆ ಬಿಜೆಪಿ ನಾಯಕರು, ಹಿಂದೂ ಸಂಘಟನೆ ಮುಖಂಡರು ಒತ್ತಾಯಿಸಿದ್ದರು. ಇದೀಗ ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ. ತುಮಕೂರಿನಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ನಾಳೆ ರಾಜ್ಯದಲ್ಲಿ ಸರ್ಕಾರಿ ರಜೆ ಘೋಷಣೆ ಮಾಡುವುದಿಲ್ಲ. ಆದರೆ ಮುಜರಾಯಿ ಇಲಾಖೆ ದೇವಾಲಯಗಳಲ್ಲಿ ನಾಳೆ ವಿಶೇಷ ಪೂಜೆ ಇರಲಿದೆ ಎಂದು ತಿಳಿಸಿದರು. ನಾಳೆ ದಾಸೋಹ, ಪಾನಕ, ಫಲಹಾರದ ಬಗ್ಗೆ ನನಗೆ ಮಾಹಿತಿ ಇಲ್ಲ. ಆದರೆ ನಾಳೆ ರಾಜ್ಯದಲ್ಲಿ ರಜೆ ಘೋಷಣೆ ಇಲ್ಲ ಎಂದು ಸ್ಪಷ್ಟಪಡಿಸಿದರು. ನಾಳೆ ಅಯೋಧ್ಯೆಯಲ್ಲಿ ರಾಮಲಲ್ಲಾ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಅರ್ಧ ದಿನ ರಜೆ ಘೋಷಿಸಿದೆ. ವಿವಿಧ ರಾಜ್ಯಗಳು ಸರ್ಕಾರಿ ರಜೆ ಘೋಷಿಸಿವೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿಯೂ ರಜೆ ಘೋಷಣೆ ಮಾಡಬೇಕು ಎಂದು ಬಿಜೆಪಿ ನಾಯಕರು ಒತ್ತಾಯಿಸಿದ್ದಾರೆ. ಆದರೆ ಸಿಎಂ ಸಿದ್ದರಾಮಯ್ಯ ನಾಳೆ ರಜೆ ಇಲ್ಲ ಎಂದು ತಿಳಿಸಿದ್ದಾರೆ.

### ರಾಮಮಂದಿರ ಉದ್ಘಾಟನೆ, ಇಂದು ವಿಶೇಷ ಪೂಜೆ, ಸಿಹಿ ಹಂಚಿಕೆ

» **ದಾವಣಗೆರೆ**

ನಗರದ ಎಸ್‌ಕೆಪಿ ರಸ್ತೆಯಲ್ಲಿನ ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲಿಜಿಯಸ್ ಟ್ರಸ್ಟ್ ವತಿಯಿಂದ ಉತ್ತರ ಪ್ರದೇಶದ ಆಯೋಧ್ಯೆಯಲ್ಲಿ ಜನವರಿ 22ರಂದು ಶ್ರೀ ಬಾಲರಾಮ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ನಗರದ ಎಸ್‌ಕೆಪಿ ರಸ್ತೆಯಲ್ಲಿನ ಶ್ರೀಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಬೆಳಿಗ್ಗೆ 9.30ಕ್ಕೆ ಶ್ರೀ ಕನ್ನಿಕಾ ಪರಮೇಶ್ವರಿ ದೇವಿಗೆ ಹಾಗೂ ಪರಿಹಾರ ದೇವತೆಗಳಿಗೆ ವಿಶೇಷ ಪೂಜೆ, ಅಲಂಕಾರ, ವಿಧಿವಿಧಾನ, ಸಿಹಿ ಹಂಚಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ.ಇದಲ್ಲದೇ ನಗರದ ವಿವಿಧ ದೇವಸ್ಥಾನಗಳು, ಪ್ರಮುಖ ವೃತ್ತಗಳಲ್ಲಿ ಸಿಹಿ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನ, ನಗರ ದೇವತೆ ಶ್ರೀದುರ್ಗಾಂಬಿಕಾ ದೇವಸ್ಥಾನ, ಹರಳೆಣ್ಣೆ ಕೊಟ್ಟಬಸಪ್ಪ (ರಾಮ್ ಅಂಡ್ ಕೋ) ವೃತ್ತದ ಗಣೇಶ ದೇವಸ್ಥಾನ, ಎಸ್‌ಎಸ್ ಬಡಾವಣೆಯ ವರ್ತುಲ ರಸ್ತೆಯಲ್ಲಿನ ಶ್ರೀಶಾರದಾಂಬ ದೇವಸ್ಥಾನ, ಜಯದೇವ ವೃತ್ತದಲ್ಲಿನ ಶಂಕರ ಮಠದಲ್ಲಿನ ಶ್ರೀರಾಮ ದೇವಸ್ಥಾನ ಸೇರಿದಂತೆ ನಗರದ ಇನ್ನಿತರೆ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ನಂತರ ಸಿಹಿ ವಿತರಣೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ನಾಳೆ ಸಾಯಿಬಾಬಾಗೆ ಶ್ರೀ ರಾಮ ಅಭಿಷೇಕ

» **ದಾವಣಗೆರೆ**

ನಗರದ ವಿಜಯನಗರ ಬಡಾವಣೆಯಲ್ಲಿರುವ ಶ್ರೀ ಸಾಯಿಬಾಬಾ ಮಂದಿರದಲ್ಲಿ ಜನವರಿ 22 ರಂದು ರಾಮಮಂದಿರ ಉದ್ಘಾಟನೆ ಅಂಗವಾಗಿ ಬೆಳಗದಗೆ 6.30ಕ್ಕೆ ಶ್ರೀ ರಾಮ ಅಭಿಷೇಕ, ಬೆಳಗ್ಗೆ 8.30ಕ್ಕೆ ಶ್ರೀ ರಾಮತರಾಕ ಹೋಮ ನಡೆಯಲಿದೆ. ಬೆಳಗ್ಗೆ 10ಕ್ಕೆ ಭಜನೆ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಕೋಸಂಬರಿ, ಪಾನಕ, ಅನ್ನಸಂತರ್ಪಣೆ ನಡೆಯಲಿದ್ದು, ಸರ್ವ ಭಕ್ತರು ಆಗಮಿಸಿ ಸ್ವಾಮಿಯ ಕೃಪಗೆ ಪಾತ್ರರಾಗಬೇಕೆಂದು ಶ್ರೀ ಸಾಯಿಬಾಬಾ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಶ್ರೀ ಗುರುದೇವ ಸ್ವಾಮೀಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಡಿ.ಮಲ್ಲಾಪುರ ಸಮೀಪವಿರುವ ಶಬರಿವನಕ್ಕೆ ಪೂಜೆಗಾಗಿ ಭಕ್ತರ ದಂಡು**

# ರಾಮನ ಸ್ಪರ್ಶದಿಂದ ಶಬರಿವನ ಪುನೀತ

» **ಪಿ.ಟಿ.ಸಿದ್ಧೇಶ್ ಲಕ್ಕಿಹಳ್ಳಿ**

ಹೊಸದುರ್ಗ: ತಾಲೂಕಿಗೂ ರಾಮಾಯಣಕ್ಕೂ ಅವಿನಾಭಾವ ನಂಟು. ಪ್ರಭು ಶ್ರೀರಾಮ ಎಂದರೆ ತಾಲೂಕಿನ, ಶ್ರೀ ದಶರಥರಾಮೇಶ್ವರ, ಶ್ರೀ ಹಾಲುರಾಮೇಶ್ವರ, ಹಾಗೆಯೇ ಇನ್ನೊಂದು ಪ್ರಸಿದ್ಧಿಯಾಗಿರುವ ಸ್ಥಳ ಎಂದರೆ ಅದು ಡಿ.ಮಲ್ಲಾಪುರ ಗ್ರಾಮದ ಸಮೀಪವಿರುವ ಶ್ರೀ ರಾಮದೇವರ ತೋಪು ಮತ್ತು ಶಬರಿವನ.

ತಾಲೂಕಿನ ಮಾಡದಕೆರೆ ಹೋಬಳಿ ದೊಡ್ಡಘಟ್ಟ ಪಂಚಾಯಿತಿ ವ್ಯಾಪ್ತಿಯ ಡಿ.ಮಲ್ಲಾಪುರ ಬಳಿ ದಟ್ಟಾರಣ್ಯದಲ್ಲಿ ಶಬರಿವನವಿದೆ. ತಾಯಿ ಶಬರಿ ರಾಮನ ಬರುವಿಗಾಗಿ ಹಣ್ಣಣ್ಣು ಮುದುಕಿಯಾಗುವವರೆಗೂ ಕಾದು ಕೊನೆಗೂ ರಾಮನ ದರ್ಶನ ಪಡೆದು ಪುನೀತವಾದ ಸ್ಥಳವಿದು ಎಂದು ಪ್ರಸಿದ್ಧಿ ಪಡೆದಿರುವ ಕ್ಷೇತ್ರವಾಗಿದೆ.

ರಾಮಾಯಣದಲ್ಲಿ ಉಲ್ಲೇಖವಾಗಿರುವ ಶಬರಿಯ ಪಾತ್ರ ಪ್ರಮುಖ ಬಿಂದು. ಈ ಶಬರಿವನ, ಸೀತಾಮಾತೆಯನ್ನ ಹುಡುಕಿಕೊಂಡು ಪ್ರಭು ಶ್ರೀರಾಮನು ದಕ್ಷಿಣಾಭಿಮುಖವಾಗಿಲಂಕೆಗೆಸಂಚರಿಸುವ ಸಮಯದಲ್ಲಿ ಮಲ್ಲಾಪುರದ ದಟ್ಟಾರಣ್ಯಕ್ಕೆ ಬಂದನು. ಇಲ್ಲಿ ತಾಯಿ ಶಬರಿಯ ದರ್ಶನವನ್ನು ಮಾಡುತ್ತಾನೆ. ಪ್ರಭು ಶ್ರೀ ರಾಮನು ಸಾಕ್ಷಾತ್ ಶ್ರೀ ಶಿವಲಿಂಗವನ್ನು



ಪ್ರತಿಷ್ಠಾಪಿಸಿ ಪೂಜೆಗಾಗಿ ತನ್ನ ಬಿಲ್ಲಿನಿಂದ ಭೂಮಿಗೆ ಸ್ಪರ್ಶಿಸಿದಾಗ ಇಲ್ಲಿ ಗಂಗಾಕೊಳ ಉದ್ಭವವಾಯಿತು. ಆ ಗಂಗೆಯಿಂದ ಶಿವಲಿಂಗವನ್ನನ ರಕ್ಷಿಸಿ ಪೂಜೆಗೈದರು. ನಂತರ ಶ್ರೀರಾಮನು ತಾಯಿ ಶಬರಿಗೆ ನಾನು ಸೀತೆಯನ್ನು ಹುಡುಕಿಕೊಂಡು ಹೋಗುತ್ತಿದ್ದು,ಸೀತೆಯನ್ನುಕರೆದುಕೊಂಡು ಹಿಂದಿರುಗುತ್ತೆನೆಂದು ಹೇಳಿ ಹೋದರು.

ಶ್ರೀರಾಮನ ಬರವಿಗಾಗಿ ಪ್ರಭು ರಾಮನ ಪರಮಭಕ್ತೆ ತಾಯಿ ಶಬರಿ, ಇಳಿಯ ವಯಸ್ಸಿನವರೆಗೂ ಕಾದು ಕುಳಿತಾಳಂತೆ. ಶ್ರೀರಾಮ ಸೀತಾಮಾತೆಯೊಂದಿಗೆ ಪುನಃ ಇದೇ ಕಾಡಿಗೆ ವಾಪಸ್ ಬಂದಾಗ ಶಬರಿ ಮಾತೆ ತನ್ನ ಪ್ರಭು ಶ್ರೀ ರಾಮನಿಗೆ




ಕಾಡಿನಲ್ಲಿರುವ ಎಲ್ಲಾ ಹಣ್ಣುಗಳನ್ನು ತಂದು ಒಮ್ಮೆ ಅದನ್ನು ತಿಂದು ಎಂಜಲು ಮಾಡಿ ಹಾಗೆಯೇ ಇಟ್ಟುಕೊಂಡಿದ್ದಳಂತೆ.

ನನ್ನ ರಾಮನು ತಿನ್ನುವ ಹಣ್ಣುಗಳು ಅತ್ಯಂತ ರುಚಿಕರವಾಗಿ ಇರಬೇಕೆಂಬುದು ಇವಳ ಬಯಕೆಯಾಗಿತ್ತು. ರಾಮ ಶಬರಿ ತಿಂದು ಬಿಟ್ಟಿದ್ದ ಎಂಜಲ ಹಣ್ಣನ್ನು ಪ್ರೀತಿಯಿಂದ ತಿಂದು ಶಬರಿಯ ಭಕ್ತಿಯನ್ನು ಮೆಚ್ಚಿದನಂತೆ. ಅಂದಿನಿಂದಲೂ ಇದು ಶಬರಿ ವನ (ಶ್ರೀರಾಮದೇವರ ತೋಪು) ಎಂದು ಪ್ರಸಿದ್ಧಿಯಾಗಿದೆ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತಿರುವ ಈ ಸಂದರ್ಭದಲ್ಲಿ ಇಲ್ಲಿಗೆ ನಿತ್ಯವೂ ನೂರಾರು ಭಕ್ತರು ಬಂದು ಪೂಜೆ ಸಲ್ಲಿಸಿ, ಹಿಂದಿರುಗುತ್ತಿದ್ದಾರೆ. ಇಂದಿಗೂ ಡಿ.ಮಲ್ಲಾಪುರ ಗ್ರಾಮದ ಶಬರಿವನಕ್ಕೆ ಭಕ್ತರು ರಾತ್ರಿ 12 ಗಂಟೆಯ ನಂತರ ನಂತರ ಶಬರಿ ವನಕ್ಕೆ ಬರುವುದಿಲ್ಲ. ಕಾರಣ ಶ್ರೀರಾಮನ ದರ್ಶನಕ್ಕಾಗಿ ದೇವಾನುದೇವತೆಗಳು ಈ ಜಾಗಕ್ಕೆ ರಾತ್ರಿಯ ಸಮಯದಲ್ಲಿ ಆಗಮಿಸುತ್ತಾರೆಂಬ ನಂಬಿಕೆ ಈ ಭಾಗದ ಜನರಲ್ಲಿದೆ. ಭಕ್ತರು ತನ್ನ ಸಂತಾನ ಫಲ, ಇಷ್ಟಾರ್ಥಗಳನ್ನು ಈಡೇರಿಸಿಕೊಳ್ಳಲು ಪ್ರತಿ ಶನಿವಾರದ ಪೂಜೆಗೆ ಸಾವಿರಾರು ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಇದೇ ಮಲ್ಲಾಪುರ ಗ್ರಾಮದಲ್ಲಿ ಪ್ರಭು ಶ್ರೀ ರಾಮನ ದೇವಾಲಯವಿದ್ದು, ಪ್ರತಿ ವರ್ಷ ರಾಮನವಮಿ ಸಮಯದಲ್ಲಿ ಶ್ರೀರಾಮನ ರಥೋತ್ಸವ ಕಾರ್ಯಕ್ರಮ ಹಾಗೂ ವಿವಿಧ ಪೂಜಾ ಹವನ ಮತ್ತು ಹೋಮಗಳು ನಡೆಯುತ್ತವೆ. ಡಿ. ಮಲ್ಲಾಪುರ ಗ್ರಾಮವು ತಾಲೂಕಿನ ಸುಪ್ರಸಿದ್ಧ ಕ್ಷೇತ್ರ ಹಾಲು ರಾಮೇಶ್ವರದಿಂದ 10 ಕಿ.ಮೀ ಅಂತರದಲ್ಲಿದ್ದು, ಹೊಸದುರ್ಗ ಹೊಳಲ್ಕೆರೆ ರಸ್ತೆಯ ಮಾವಿನಕಟ್ಟೆ ಗೇಟ್ ನಿಂದ ಕೇವಲ 5 ಕಿಲೋಮೀಟರ್ ದೂರದಲ್ಲಿದೆ.

ರಾಮನ ಪ್ರಾಣ ಪ್ರತಿಷ್ಠಾಪನೆ ಯಾಗುತ್ತಿರುವ ಈ ಪವಿತ್ರ ದಿನಗಳಲ್ಲಿ ನಮ್ಮ ಊರಿನ ಶಬರಿವನ ಬಹಳಷ್ಟು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿದ್ದು, ಜನಪ್ರತಿನಿಧಿಗಳ ಅನುದಾನಕ್ಕಾಗಿ ಕಾಯುತ್ತಿದ್ದೇವೆ. ಇಲ್ಲಿರುವ ಪ್ರಭು ಶ್ರೀ ರಾಮ, ಲಕ್ಷ್ಮಣ ಹಾಗೂ ಸೀತಾದೇವಿಯ ಮಂದಿರದಲ್ಲಿ ರಾತ್ರಿಯಿಡೀ ರಾಮ ಭಜನೆ ಮಾಡಿ ಗ್ರಾಮ ದೇವತೆ ಶ್ರೀ ರಾಮಾಂಜನೇಯ ಸ್ವಾಮಿಯನ್ನು ವಿಶೇಷ ಅಲಂಕಾರಗಳಿಂದ ಅಲಂಕೃತಗೊಳಿಸಿ ರಾತ್ರಿಯಿಡೀ ಮೆರವಣಿಗೆ ಮಾಡುತ್ತೇವೆ.

» **ಸುಧಾಕರ್. ಡಿ. ಮಲ್ಲಾಪುರ ಗ್ರಾಮದ ನಿವಾಸಿ**

# ರಂಗೋಲಿಯಲ್ಲಿ ಶ್ರೀ ರಾಮನ ಚಿತ್ರ

» **ದಾವಣಗೆರೆ**

ಅಯೋಧ್ಯೆಯಲ್ಲಿ ಶ್ರೀ ರಾಮಮಂದಿರ ಉದ್ಘಾಟನೆ ಮತ್ತು ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಇಲ್ಲಿನ ವಿದ್ಯಾನಗರದ ಉದ್ಯಾನದಲ್ಲಿ 'ಸೂಪರ್ ಮಾಮ್ಸ್ ಆಫ್ ದಾವಣಗೆರೆ' ಮಹಿಳಾ ತಂಡದ ಸದಸ್ಯೆಯರು ದೀಪ ಬೆಳಗುವ ಮೂಲಕ 'ಶ್ರೀರಾಮ ದೀಪಾವಳಿ' ಆಚರಿಸಿದರು.

ಇದಕ್ಕೂ ಮೊದಲು ಸೂಪರ್ ಮಾಮ್ಸ್ ಆಫ್ ದಾವಣಗೆರೆ ವತಿಯಿಂದ ಮಹಿಳೆಯರು ವಿದ್ಯಾನಗರದ ಶಿವ ಪಾರ್ವತಿ ದೇವಾಲಯದಿಂದ ಶ್ರೀ ರಾಮ ನಾಮ ಜಪಿಸುತ್ತಾ ಉದ್ಯಾನದವರೆಗೆ ಮೆರವಣಿಗೆ ನಡೆಸಿದರು.

ಬಳಿಕ ಉದ್ಯಾನದಲ್ಲಿ ರಂಗೋಲಿಯಲ್ಲಿ ಅರಳಿದ ಶ್ರೀ ರಾಮನಿಗೆ ಜ್ಯೋತಿ ಬೆಳಗುವ ಮೂಲಕ ಪ್ರಾರ್ಥನೆ ಸಲ್ಲಿಸಿ, ಜೈ ಶ್ರೀರಾಮ್ ಘೋಷಣೆ ಕೂಗಿದರು. ರಂಗೋಲಿಯಲ್ಲಿ ಮೂಡಿದ್ದ ಶ್ರೀರಾಮನಚಿತ್ರದಸುತ್ತದೀಪಗಳನ್ನು ಇಟ್ಟು ಸಂಭ್ರಮಿಸಿದರು.





'ಜನವರಿ 22ರಂದು ಮನೆಯಲ್ಲಿ ವಿಶೇಷ ಪೂಜೆ ಮಾಡುತ್ತಿದ್ದು, ಎರಡನೇ ದೀಪಾವಳಿಯಂತೆ ಆಚರಿಸುತ್ತೇವೆ. ಆ ದಿನ ಅಯೋಧ್ಯೆಗೆ ಹೋಗಲು ಆಗದ ಹಿನ್ನೆಲೆಯಲ್ಲಿ ಒಟ್ಟಾಗಿ ಸೇರಿ ರಾಮನಿಗೆ ನಮನ ಸಲ್ಲಿಸಲಿದ್ದೇವೆ' ಎಂದು ತಂಡದ ಸದಸ್ಯೆಯರು ತಿಳಿಸಿದರು.

ಇದೇ ವೇಳೆ ಮಕ್ಕಳು ಶ್ರೀರಾಮ, ಸೀತೆ ಹಾಗೂ ಹನುಮಂತನ ವೇಷ ಧರಿಸಿ ಎಲ್ಲರ ಗಮನ ಸೆಳೆದರು.



**ಅಯೋಧ್ಯೆ ಶ್ರೀ ರಾಮಮಂದಿರದ ಪ್ರತಿಸ್ಥಾಪನೆ ಅಂಗವಾಗಿ ಪುಣ್ಯ ಕ್ಷೇತ್ರಗಳು ಹಾಗೂ ತೀರ್ಥ ಕ್ಷೇತ್ರಗಳ ಸ್ವಚ್ಚತ ಅಭಿಯಾನದ ಹಿನ್ನೆಲೆಯಲ್ಲಿ ಇಂದು ಚಿತ್ರದುರ್ಗ ನಗರದ ತುರವನೂರು ರಸ್ತೆಯ ಶ್ರೀ ವೆಂಕಟರ ಮಣಸ್ವಾಮಿಯ ದೇವಸ್ಥಾನದ ಅವರಣನ್ನು ಸ್ವಚ್ಚತೆಗೊಳಸಲಾಹಿತು ಈ ಸಂದರ್ಭದಲ್ಲಿ ವಿಧಾನ ವಿಧಾನ ಪರಿಷತ್ ಶಾಸಕರಾದ ಕೆ ಎಸ್ ನವೀನ್ ,ಜಿಲ್ಲಾಧ್ಯಕ್ಷರಾದ ಎ ನವೀನ್ ಯುವ ಮುಖಂಡ ಅನಿತ್ ಕುಮಾರ್, ಉಪಾಧ್ಯಕ್ಷ ಸಂಪತ್ ಕುಮಾರ್ ಪಾಲ್ಗೊಂಡಿದ್ದರು**

# ಸರಯೂ ನದಿಯ ತೀರಕ್ಕೆ ಕರ್ನಾಟಕದ ಸಪ್ತರ್ಷಿಗಳು



» **ಚಿತ್ರದುರ್ಗ**

ಅಯೋಧ್ಯೆ ಶ್ರೀರಾಮ ಜನ್ಮಭೂಮಿಯಲ್ಲಿ ಜನವರಿ 22 ರಂದು ನಡೆಯಲಿರುವ ಶ್ರೀರಾಮ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮಕ್ಕೆ ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯಿಂದ ಜಿಲ್ಲೆಯ ವಿವಿಧ ಮಠಾಧೀಶರು ತೆರಳಿದ್ದಾರೆ. ಅಯೋಧ್ಯೆಯ ಐತಿಹಾಸಿಕ ಸಮಾರಂಭಕ್ಕೆ ಸಾಕ್ಷಿಯಾಗಲು ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಿಂದ ಮಠಾಧೀಶರು ಪ್ರಯಾಣ ಬೆಳೆಸಿದರು.

ನಗರದ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಗೆ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಹೊಸದುರ್ಗ ತಾಲೂಕಿನ ಕುಂಚಿಟಿಗ ಮಠದ ಶ್ರೀ ಶಾಂತವೀರ ಸ್ವಾಮೀಜಿ ಭಗೀರಥ ಗುರುಪೀಠದಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿರನ್ನು ಭಕ್ತರು ಗೌರವಿಸಿ ಅಯೋಧ್ಯೆಗೆ ಕಳುಹಿಸಿಕೊಟ್ಟಿದ್ದಾರೆ.

ಶ್ರೀ ಶಾಂತವೀರ ಸ್ವಾಮೀಜಿ ಹಾಗೂ ಶ್ರೀ ಮಾದಾರ ಚನ್ನಯ್ಯ ಸ್ವಾಮೀಜಿ ಮುರುಘಾ ಮಠದಲ್ಲಿರುವ ಶ್ರೀ ಮುರುಗಿ ಶಾಂತವೀರ ಸ್ವಾಮಿಗಳ ಕರ್ತೃ ಗದ್ದುಗೆಗೆ ಭೇಟಿ ನೀಡಿ ಆಶೀರ್ವಾದ ಪಡೆದು ಪೂಜೆ ಸಲ್ಲಿಸಿ ಅಯೋಧ್ಯೆಗೆ ತೆರಳಿದರು. ಜಿಲ್ಲೆಯ ಮಠಾಧೀಶರ ಜೊತೆಗೆ ಕಾಗಿನೆಲೆ ಕನಕ ಗುರುಪೀಠದ ಶ್ರೀ ನಿರಂಜನಾನಂದಪುರಿ ಸ್ವಾಮೀಜಿ, ಹರಿಹರ ರಾಜನಹಳ್ಳಿಯ ಶ್ರೀ ವಾಲ್ಮೀಕಿ ಪ್ರಸನ್ನಾನಂದಪುರಿ ಸ್ವಾಮೀಜಿ, ಹರಿಹರ ಪಂಚಮಸಾಲಿ ಗುರುಪೀಠದ ಶ್ರೀ ವಚನಾನಂದ ಸ್ವಾಮೀಜಿ ಸೇರಿದ್ದಾರೆ.

ಚಿತ್ರದುರ್ಗದಿಂದ ಬೆಂಗಳೂರಿಗೆ ತೆರಳಿರುವ ಎಲ್ಲ ಮಠಾಧೀಶರು, ಅಲ್ಲಿಂದ ವಿಮಾನದ ಮೂಲಕ ಲಕ್ನೋ ತಲುಪಲಿದ್ದಾರೆ. ಲಕ್ನೋದಿಂದ ಅಯೋಧ್ಯೆಗೆ ಕಾರಿನಲ್ಲಿ ಪ್ರಯಾಣಿಸಲಿದ್ದಾರೆ.ಅಯೋಧ್ಯೆಯಲ್ಲಿ ದೇಶದ ಸುಮಾರು 4 ಸಾವಿರ ಸಾಧು ಸಂತರು, ಗಣ್ಯರು ಸೇರಲಿದ್ದಾರೆ.

**ಪ್ರಮುಖ ಸುದ್ದಿ**

# ಸರ್ಕಾರಿ ನೌಕರರಿಗೆ ಒಪಿಎಸ್ ಜಾರಿ ಕುರಿತು ನೀಡಿದ ಗ್ಯಾರಂಟಿ ಈಡೇರಿಸದೇ ಇದ್ದಲ್ಲಿ ಸರ್ಕಾರ ವಿರುದ್ಧ ಹೋರಾಟ: ಎಚ್.ಓ.ರಾಜಣ್ಣ

» **ಚಳ್ಳಕೆರೆ**

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ನೇತೃತ್ವದ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಸ್ತುತ 2023ರಚುನಾವಣೆಯಲ್ಲಿ ಗೆಲುವು ಸಾಧಿಸಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ ರಾಜ್ಯದಲ್ಲಿ ಒಪಿಎಸ್ ಜಾರಿಮಾಡುವ ಭರವಸೆ ನೀಡಿ ಈಗ ಭರವಸೆಯನ್ನು ಮರೆತು ಸರ್ಕಾರಿ ನೌಕರರ ಭವಿಷ್ಯವನ್ನು ಕತ್ತಲಲ್ಲಿಟ್ಟಿದ್ದಾರೆಂದು ತಾಲ್ಲೂಕು ಸರ್ಕಾರಿ ನೌಕರರ ಎನ್‌ಪಿಎಸ್ ಸಂಘದ ಅಧ್ಯಕ್ಷ ಎಚ್.ಓ.ರಾಜಣ್ಣ ಆರೋಪಿಸಿದರು.

ಅವರು, ಭಾನುವಾರ ಅಂಬೇಡ್ಕರ್ ವೃತ್ತದಲ್ಲಿ ರಾಜ್ಯ ಸಂಘದ ಕರೆಯ ಮೇರೆಗೆ ಸರ್ಕಾರದ ವಿರುದ್ಧ ಪ್ರತಿಭಟಿಸಿ, ಒಪಿಎಸ್ ಜಾರಿಮಾಡುವಂತೆ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆಮಾಡಿಒತ್ತಾಯಪಡಿಸಿದರು. ಪ್ರಸ್ತುತ ಕಳೆದ ಏಳು ತಿಂಗಳಿನಿಂದ ಅಧಿಕಾರದಲ್ಲಿ ಇರುವ ಕಾಂಗ್ರೆಸ್ ಪಕ್ಷದ ಆಡಳಿತ ಸರ್ಕಾರ ಸರ್ಕಾರಿ ನೌಕರರ



ಬೇಡಿಕೆಗಳನ್ನು ಈಡೇರಿಸುವಲ್ಲಿ ನಿರ್ಲಕ್ಷ್ಯ ವಹಿಸಿದೆ. ಹಲವಾರು ಬಾರಿ ಮನವಿ ಮಾಡಿಕೊಂಡರೂ ಸಹ ಸರ್ಕಾರಿ ನೌಕರರ ಯಾವುದೇ ಬೇಡಿಕೆಯನ್ನು ಇದುವರೆಗೂ ಪರಿಗಣಿಸಿಲ್ಲ. ಆದ್ದರಿಂದ ಮುಂಬರುವ ದಿನಗಳಲ್ಲಿ ಸರ್ಕಾರದ ನಿರ್ಧಾರವನ್ನು ವಿರೋಧಿಸಿದ ಬೀದಿಗಿಳಿದು ಹೋರಾಟ ನಡೆಸುವ ಎಚ್ಚರಿಕೆ ನೀಡಿದರು.

ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್ ಮಾತನಾಡಿ, ಚುನಾವಣಾ ಸಂದರ್ಭದಲ್ಲಿ ನೀಡಿದ ಭರವಸೆಗಳನ್ನು ಸರ್ಕಾರ ಮರೆತಂತೆ ಕಾಣುತ್ತಿದೆ. ಹಲವಾರು ಬಾರಿ ಸರ್ಕಾರಿ ನೌಕರರ ಸಂಘ ಮನವಿ ಮಾಡಿದರೂ ಯಾವುದೇ ಸೂಕ್ತ ಉತ್ತರ ಸರ್ಕಾರದಿಂದ ದೊರಕಿಲ್ಲ. ಸರ್ಕಾರಿ ನೌಕರರ ಸೌಲಭ್ಯಗಳಿಗೆ ಸರ್ಕಾರ ಕತ್ತರಿ ಹಾಕುವಲ್ಲಿ ಯಶಸ್ವಿಯಾಗಿದೆ. ನೌಕರರ ಹೋರಾಟ ಹಾಗೂ ಮನವಿಯನ್ನು ಲಘುವಾಗಿ ಪರಿಗಣಿಸಲಾಗಿದೆ. ಆದರೆ, ನಮಗೆ ಬೇಕಾದ ಬೇಡಿಕೆ ಈಡೇರಿಸದೆ ಇದ್ದರೆ ಮುಂದಿನ ದಿನಗಳಲ್ಲಿ ಸರ್ಕಾರದ ನಿಲುವುಗಳನ್ನು ಖಂಡಿಸಿ ಹೋರಾಟ ನಡೆಸುವ ಎಚ್ಚರಿಕೆ ನೀಡಿದರು. ಅನುದಾನ ಶಾಲಾ–ಕಾಲೇಜುಗಳ ನೌಕರರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಚುನಾವಣಾ ಸಂದರ್ಭದಲ್ಲಿ ಮತಗಳನ್ನು ಪಡೆಯಲು ಸುಳ್ಳು ಭರವಸೆ ನೀಡಿರುವುದು ಈ ರುಜುವಾತಾಗಿದೆ. ಆದರೆ, ಸರ್ಕಾರಿ ನೌಕರರು ಮಾತ್ರ ಸರ್ಕಾರ ವಿರುದ್ಧ ವ್ಯಾಪಕ ಅಸಮದಾನ ಹೊಂದಿದ್ದು, ಈ ಬಗ್ಗೆ ಸರ್ಕಾರ ಕೂಡಲೇ ಸೂಕ್ತ ನಿರ್ಧಾರವನ್ನು ಕೈಗೊಂಡು ಸರ್ಕಾರಿ ನೌಕರರ ಕಲ್ಯಾಣಕ್ಕೆ ಶ್ರಮಿಸಬೇಕು ಎಂದರು.

ತಾಲ್ಲೂಕು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪಿ.ಮಹಂತಣ್ಣ,ಅನುದಾನಿತಪ್ರೌಢಶಾಲೆಗಳ ನೌಕರರ ಸಂಘದ ಅಧ್ಯಕ್ಷ ಪಿ.ನಾಗರಾಜು, ಕಾರ್ಯದರ್ಶಿ ಡಿ.ವೀರಣ್ಣ, ಜಿಲ್ಲಾ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ತಳಕುಸುರೇಶ್, ಬೆಸ್ಕಾಂ ನಾಗರಾಜು, ರಮೇಶ್, ಗಣೇಶ್, ನಾಗರಾಜು, ಪಾಲಯ್ಯ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಸ್ವತಃ ಗೇಟ್ ಓಪನ್ ಮಾಡಿ ಶಾಂತಿಸಾಗರಕ್ಕೆ ನೀರು ಹರಿಸಿದ ಶಾಸಕರಾದ ಬಸವರಾಜು ವಿ ಶಿವಗಂಗಾ



» **ಚನ್ನಗಿರಿ**

ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದೆಂದು ಶಾಸಕರಾದ ಬಸವರಾಜು ವಿ ಶಿವಗಂಗಾ ಅವರೇ ಸ್ವತಃ ಭದ್ರಾ ಕಾಲುವೆಯ (ಬಿಡುಗಂಡಿ) ಗೇಟ್ ಓಪನ್ ಮಾಡಿ ಇತಿಹಾಸ ಪ್ರಸಿದ್ಧ ಹಾಗೂ ಏಷ್ಯಾದಲ್ಲೇ ಎರಡನೇ ಅತೀದೊಡ್ಡ ಕೆರೆ ಶಾಂತಿಸಾಗರ(ಸೂಳೆಕೆರೆ)ಗೆ ನೀರು ಹರಿಸಿದ್ದಾರೆ. ಶಾಂತಿಸಾಗರಕ್ಕೆ ಭೇಟಿ ನೀಡಿದ ಗೇಟ್ ಓಪನ್ ಮಾಡಿ ನೀರು ಹರಿಸಿದರು. ಶಿವಮೊಗ್ಗದಲ್ಲಿ ನಡೆದಂತ ನೀರಾವರಿ ಸಲಹಾ ಸಮಿತಿಯಲ್ಲಿ ಕುಡಿಯುವ ನೀರಿಗಾಗಿ ಹರಿಸಲು ತೀರ್ಮಾನ ಮಾಡಲಾಗಿತ್ತು. ಇದುವರೆಗೂ ಶಾಂತಿಸಾಗರಕ್ಕೆ ನೀರನ್ನ ಭದ್ರಾ ಕಾಲುವೆಯಿಂದ ಹರಿಸಿರಲಿಲ್ಲ. ಶಾಸಕರಾದ ಬಸರಾಜು ವಿ ಶಿವಗಂಗಾ ಭೇಟಿ ನೀಡಿದ ಹಿನ್ನೆಲೆ ಸ್ವತಃ ಅವರೇ ಗೇಟ್ ಓಪನ್ ಮಾಡಿ ಕೆರೆಗೆ ನೀರು ಹರಿಸಿದರು. ಇದೀಗ ಪ್ರತಿ ನಿತ್ಯ ಕುಡಿಯಲು 50 ಕ್ಯೂಸೆಕ್ ಬಳಸಿಕೊಳ್ಳಬಹುದಾಗಿದೆ. ಇದೀಗ ಈ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೀರು ಹರಿಸಲಾಗಿದ. ಶಾಸಕರೇ ಗೇಟ್ ಓಪನ್ ಮಾಡಿ ಕೆರೆಗೆ ನೀರು ಹರಿಸಿದ್ದ ಹಿನ್ನೆಲೆ ಈ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಸದ್ಯ ತಪ್ಪಿದಂತಾಗಿದೆ. ಈ ಸಂದರ್ಭದಲ್ಲಿ ಅಧಿಕಾರಿಗಳು, ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಜ.28ರಂದು ಪೋಲೀಸ್ ಕಾನ್ಸ್‌ಟೇಬಲ್ ಹುದ್ದೆಗೆ ಲಿಖಿತ ಪರೀಕ್ಷೆ

» **ಚಿತ್ರದುರ್ಗ**

2022-23ನೇ ಸಾಲಿನ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್)-3064 ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ಇದೇ ಜನವರಿ 28ರಂದು ಭಾನುವಾರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ರವರೆಗೆ ಚಿತ್ರದುರ್ಗ ನಗರದಲ್ಲಿ ಒಟ್ಟು 25 ಶಾಲಾ, ಕಾಲೇಜುಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದೆ.
ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಯಾವುದೇ ರೀತಿಯ ಪುಸ್ತಕ, ಕೈಬರಹ ಚೀಟಿ, ಪೇಜರ್, ಕ್ಯಾಲ್ಕುಲೇಟರ್, ಇಯರ್‌ಫೋನ್, ಮೊಬೈಲ್‌ಫೋನ್ ಪರೀಕ್ಷೆಗೆ ತರಲು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಬೆಲೆ ಬಾಳುವ ವಸ್ತು, ಸಾಮಾಗ್ರಿ ತರದಂತೆ ತಿಳಿಸಲಾಗಿದ್ದು, ತಮ್ಮ ವಸುಗಳಿಗೆ ತಾವೇ ಜವಾಬ್ದಾರರು. ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್ ಸಹ ಕಳಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರ ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ ಹಾಗೂ ಕರೆಪತ್ರದಲ್ಲಿ ನಮೂದಿಸಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಇಂದು ಪಂಚಾಮೃತ ಅಭಿಷೇಕ




» **ಚಿತ್ರದುರ್ಗ**

ಅಯೋಧ್ಯೆಯಲ್ಲಿ ಸೋಮವಾರ ನಡೆಯಲಿರುವ ಶ್ರೀ ಬಲರಾಮಚಂದ್ರ ಮೂರ್ತಿಯ ದೇವತಾ ಪ್ರಾಣ ಪ್ರತಿಷ್ಠಾಪನೆ ಹಾಗೂ ಭವ್ಯವಾದ ನೂತನ ದೇವಾಲಯ ಉದ್ಘಾಟನೆ ಅಂಗವಾಗಿ ಅಯ್ಯಪ್ಪ ಸ್ವಾಮಿಯ ದೇವಾಲಯದಲ್ಲಿ ಬೆಳಿಗ್ಗೆ 7 ಗಂಟೆಗೆ ಶ್ರೀ ಆಂಜನೇಯ ಸ್ವಾಮಿ ಶ್ರೀ ಮಹಾ ವಿಷ್ಣು ದೇವತೆಗಳಿಗೆ ಫಲ ಪಂಚಾಮೃತ ಅಭಿಷೇಕ ವಿಶೇಷ ಅಲಂಕಾರ ಅರ್ಚನೆ ತಾರಕ ಹೋಮ ಹೂವಿನ ಅಲಂಕಾರ ಹಾಗೂ ಮಧ್ಯಾಹ್ನ ಪ್ರಸಾದದ ವ್ಯವಸ್ಥೆ ಇರುತ್ತದೆ. ಸಂಜೆ ಉತ್ತರಾಭಿಮುಖವಾಗಿ ಅಯ್ಯಪ್ಪ ಸ್ವಾಮಿ ಗರ್ಭಗುಡಿ ಹಾಗೂ ಶ್ರೀ ಆಂಜನೇಯ ಸ್ವಾಮಿ ಆವರಣದಲ್ಲಿ ಸಂಜೆ 6.30 ಕ್ಕೆ ದೀಪಾರಾಧನೆ ನಡೆಯಲಿದೆ ಎಂದು ಅಯ್ಯಪ್ಪ ಸ್ವಾಮಿ ಸೇವಾ ಟ್ರಸ್ಟ್ ಅಧ್ಯಕ್ಷ ಶರಣ್ ಕುಮಾರ್ ತಿಳಿಸಿದ್ದಾರೆ.

# ಶಿವಶರಣ ಸಂದೇಶಗಳು ಇಂದಿಗೂ ಪ್ರಸ್ತುತ

» **ಚಿತ್ರದುರ್ಗ**

ಎಂಟನೂರು ವರ್ಷಗಳ ಹಿಂದೆ ಬಾಳಿ ಬದುಕಿದ ಶಿವಶರಣರು ತಮ್ಮ ವಚನಗಳಲ್ಲಿ ಸಾರಿದ ಸಂದೇಶಗಳು ಇಂದಿನ ಸಮಾಜದಲ್ಲೂ ಪ್ರಸ್ತುತ ಎನಿಸುತ್ತವೆ. ಅವರು ಹೇಳಿದ ಸಾಕಷ್ಟು ವಿಚಾರಗಳು ವಾಸ್ತವಾಗಿವೆ. ಸಮಾಜದ ಬದಲಾವಣೆಗೆ ಸಹಕಾರಿಯಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಭಾನುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಹಾಗೂ ಜಿಲ್ಲಾ ಗಂಗಾಂಬಿಕ ಬೆಸ್ತರ ಸಂಘದ ಸಹಯೋಗದಲ್ಲಿ ಆಯೋಜಿಸಲಾದ ನಿಜ ಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶರಣರು ಹೇಳಿದ ಮಾತುಗಳನ್ನು ನಾವು ಪಾಲಿಸಿದ್ದೇವೆಯೇ ಎಂದು ನಮ್ಮೊಳಗೆ ಪ್ರಶ್ನೆ ಮಾಡಿಕೊಂಡರೆ ನಮಗೆ ಸಾಕಷ್ಟು ಅಂತರ ಕಾಣಿಸುತ್ತದೆ. 12ನೇ ಶತಮಾನದಲ್ಲಿ ಎಲ್ಲಾ ಕಾಯಕ ಸಮುದಾಯಗಳಿಂದ ಬಂದವರು ಅನುಭವ ಮಂಟಪವನ್ನು ಕಟ್ಟಿದರು. ಕಾಯಕ, ಭಕ್ತಿ, ದಾಸೋಹ ಶರಣ ಪ್ರಮುಖ ತತ್ವಗಳು. ಅಂಬಿಗ ವೃತ್ತಿ ಮಾಡುತ್ತಿದ್ದ ಚೌಡಯ್ಯ ಕೂಡ ಪ್ರಮುಖ ಶಿವಶರಣ. ಇವರನ್ನು ನೇರ ನಿಷ್ಠುರಿ, ನಿಜ ಶರಣ ಎಂದೇ ಎಲ್ಲರೂ ಕರೆಯುತ್ತಿದ್ದರು. ಅಂಬಿಗರ ಚೌಡಯ್ಯ ತನ್ನ ವಚನಗಳಲ್ಲಿ ತಳ ಸಮುದಾಯದ ಜನರ ವೇದನೆಗಳನ್ನು ಗಟ್ಟಿತನದಿಂದ ಪ್ರಸ್ತುತ ಪಡಿಸಿದ್ದಾರೆ. ಅಂಬಿಗರ ಚೌಡಯ್ಯನವರ ಜ್ಞಾನ ಹಾಗೂ ಸಮಾಜದ ಬಗೆಗಿನ ತತ್ಪರತೆ ಎಲ್ಲರಿಗೂ ಮಾದರಿಯಾಗಿದೆ. ಚೌಡಯ್ಯನವರ ವಚನಗಳು ಅರ್ಥಪೂರ್ಣವಾಗಿವೆ ಎಂದರು. ಶಿವಶರಣರಲ್ಲಿ ದಾಸೋಹ ತತ್ವ ಇತ್ತು. ಇದು ಸಂಪತ್ತನ್ನು ಕ್ರೂಡೀಕರಣ ಮಾಡುವುದಕ್ಕೆ ವಿರುದ್ಧವಾಗಿತ್ತು. ಸಂಪತ್ತನ್ನು ಸಮಾನವಾಗಿ ಹಂಚಲಾಗುತ್ತಿತ್ತು. ಈಗಿನ ಪ್ರಪಂಚದಲ್ಲಿ ಸಂಪತ್ತನ್ನೂ ಕ್ರೂಡಿಕರಿಸಿ ಮಕ್ಕಳು ಮತ್ತು ಮೊಕ್ಕಳಿಗೆ ಶೇಖರಿಸಿಡುವ ಪರಿಪಾಠ ಬೆಳೆದು ಬಂದಿದೆ. ಹಂಚುವ ಸಂಸ್ಕೃತಿ ಕಡಿಮೆಯಾಗುತ್ತಿದೆ. ವಿಭೂತಿ ಹಾಗೂ ರುದ್ರಾಕ್ಷಿ ಧರಿಸಿದ ತಕ್ಷಣ ನಾವು ಶಿವಶರಣರು ಆಗುವುದಿಲ್ಲ. ಅವರ ತತ್ವಗಳನ್ನು ಮೈಗೂಡಿಸಿಕೊಳ್ಳಬೇಕು. ಜ್ಯಾತ್ಯಾತೀತ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಆಧುನಿಕ ಸಮಾಜದಲ್ಲಿ ವೃತ್ತಿಗಳು ಮಾಯವಾಗಿವೆ. ಬೆಸ್ತ ಸಮುದಾಯದವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ, ಸ್ಪರ್ಧಾತ್ಮಕ ಜಗತ್ತಿಗೆ ಅಣಿಗೊಳಿಸಬೇಕು. ಚಿತ್ರದುರ್ಗ ಜಿಲ್ಲೆಯಲ್ಲಿ ಗಂಗಾಂಬಿಕ ಬೆಸ್ತ ಸಮುದಾಯದಿಂದ ವಿದ್ಯಾರ್ಥಿ ನಿಲಯ ನಿರ್ಮಿಸಲು ಜಿಲ್ಲಾಡಳಿತದಿಂದ ನಿವೇಶನ ಮಂಜೂರು ಮಾಡುವುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಭರವಸೆ ನೀಡಿದರು. ಉಪನ್ಯಾಸಕ ಡಾ.ಬಿ.ಎಂ.ಗುರುನಾಥ ಮಾತನಾಡಿ, ಅಂಬಿಗರ ಚೌಡಯ್ಯ ಕಲ್ಯಾಣದ ಧೃವತಾರೆ ಹಾಗೂ ತತ್ವಜ್ಞಾನಿಯಾಗಿದ್ದರು. ಇವರ 400 ಕ್ಕೂ ಅಧಿಕ ವಚನಗಳು ಲಭ್ಯವಾಗಿವೆ. ಇವುಗಳಲ್ಲಿ ಸಮಾಜದ ಜಾತಿ ವ್ಯವಸ್ಥೆ, ಮೂಡ ನಂಬಿಕೆಗಳ ಬಗ್ಗೆ ಚುಚ್ಚು ಮಾತುಗಳಿವೆ. ಹಸಿಗೋಡೆಗೆ ಹರಳು ಎಸೆದಂತೆ ಚೌಡಯ್ಯ ವಚನಗಳು. ಬಸವಣ್ಣ ಸೇರಿದಂತೆ ಬಹಳಷ್ಟು ವಚನಕಾರರು ಚೌಡಯ್ಯನನ್ನು ನಿಜಶರಣ ಎಂದು ಕರೆದಿದ್ದಾರೆ. ರಾಜ್ಯದ ಮಂಗಳೂರು ಹಾಗೂ ಕಲಬುರ್ಗಿ ವಿಶ್ವ ವಿದ್ಯಾಲಯದಲ್ಲಿ ಚೌಡಯ್ಯನವರ ಅಧ್ಯಯನ ಪೀಠಗಳು ಇವೆ. ಹಂಪಿ ವಿಶ್ವ ವಿದ್ಯಾಲಯ ಬೆಸ್ತರ ಕುರಿತು ಕುಲಶಾಸ್ತ್ರೀಯ ಅಧ್ಯಯನ ನಡೆಸಿದೆ. ಈ ಮೂರು ವಿಶ್ವ ವಿದ್ಯಾಲಯದ ಅಧ್ಯಯನಗಳು ಬೆಸ್ತರನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಲು ಶಿಫಾರಸ್ಸು ಮಾಡಿವೆ. ರಾಜ್ಯ ಸರ್ಕಾರವು ಈ ಶಿಫಾರಸ್ಸನ್ನು ಒಪ್ಪಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಕೊಟ್ಟಿದೆ ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಸ್ವಾಗತಿಸಿದರು. ರಂಗ ನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ನಿರೂಪಿಸಿದರು. ನಿವೃತ್ತ ಪಿ.ಯು. ಉನಿರ್ದೇಶಕ ನಾಗರಾಜ ವಂದಿಸಿದರು.

ಜಿಲ್ಲಾ ಗಂಗಾಂಬಿಕ ಬೆಸ್ತರ ಸಂಘದ ಅಧ್ಯಕ್ಷ ಹೆಚ್.ಡಿ.ರಂಗಯ್ಯ, ಉಪಾಧ್ಯಕ್ಷ ಕೃಷ್ಣಮೂರ್ತಿ, ಖಜಾಂಜಿ ರಂಗನಾಥ, ಮುಖಂಡರುಗಳಾದ ಶಿವಕುಮಾರ್, ರವಿಚಂದ್ರ, ನಾಗರಾಜ.ಎಂ.ಆರ್., ದೊರೆ ಸ್ವಾಮಿ, ಮಹೇಶ್, ಲೀಲಾವತಿ, ಜಯಣ್ಣ, ರಾಮಸ್ವಾಮಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಇತರೆ ಮುಖಂಡರು ಉಪಸ್ಥಿತರಿದ್ದರು.



# ಕಲ್ಯಾಣ ಶರಣರಲ್ಲಿ ನಿಜ ಶರಣ ಅಂಬಿಗ ಚೌಡಯ್ಯ

» **ದಾವಣಗೆರೆ**

12ನೇ ಶತಮಾನದಲಿ ಜಗತ್ತಿಗೆ ಕಾಯಕ ಶ್ರದ್ಧೆಯನ್ನು ಪರಿಚಯಿಸಿದವರು ಕಲ್ಯಾಣದ ಶರಣರು, ಅವರಲ್ಲಿ ಒಬ್ಬರ್ಲೂ ನಿಜಶರಣ ಅಂಬಿಗರ ಚೌಡಯ್ಯ ಎಂದು ಅಪಾರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀಮಹಾಯೋಗಿ ವೇಮನ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ನಿಜಶರಣ ಅಂಬಿಗರ ಚೌಡಯ್ಯನವರು 12ನೇ ಶತಮಾನದಲ್ಲಿಯೇ ಜಾತೀಯತೆ ಮೌಢ್ಯತೆಯನ್ನು ಖಂಡಿಸಿ ತಮ್ಮ ಹೆಸರನ್ನೇ ಅಂಕಿತವನ್ನಾಗಿಟ್ಟುಕೊಂಡಿರುವ ವಿಭಿನ್ನ ವ್ಯಕ್ತಿತ್ವದ ಶ್ರೇಷ್ಠ ವಚನಾಕಾರರು ಇವರ ವಚನದಲ್ಲಿನ ತತ್ವದರ್ಶಗಳು ಸಮಾಜಕ್ಕೆ ಇಂದಿಗೂ ಮಾದರಿ.ಆಗಿನ ಕಾಲದಲ್ಲಿ ಜನರು ದೇವರನ್ನು ಕಂಡುಕೊಳ್ಳಲು ಸಾಧ್ಯವಾಗುತ್ತಿರಲ್ಲಿಲ್ಲ. ಆಗ ಇಂತಹ ವಚನಕಾರರ ಮೂಲಕ ದೇವರನ್ನು ಕಾಣುತ್ತಿದ್ದರು. ಆ ಸಂದರ್ಭದಲ್ಲಿ ಬಂದವರೇ ನಿಜ ಶರಣ ಅಂಬಿಗರ ಚೌಡಯ್ಯ ಇವರು 12ನೇ ಶತಮಾನದ ವಚನಕಾರರು, ಸಾಮಾಜಿಕ ವಿಮರ್ಶಕರು ಎಂದರು.ತಮ್ಮ ವಿಶಿಷ್ಟವಾದ ಒಗ್ಗಟು ವಚನಗಳಿಗೆ ಹೆಸರುವಾಸಿ ಮತ್ತು ಬೇರೆ ಇತರೆ ವಚನಕಾರರಿಗಿಂತ ಬಿನ್ನರಾದವರು. ಹನ್ನೆರಡನೇ ಶತಮಾನದಲ್ಲಿ ಕಲ್ಯಾಣದ ಶಿವಶರಣರ ಮಧ್ಯದಲ್ಲಿ ಪ್ರಜ್ವಲವಾಗಿ ಬೆಳಗಿದ ಅಂಬಿಗರ ಚೌಡಯ್ಯ. ಮಾತು ಕಟುವಾದರೂ ದಿಟವನ್ನೆ ನುಡಿದು ದಿಟ್ಟ ನೀಲಿವಿನೊಂದಿಗೆ ನಡೆದವರು. ಮಹಾಯೋಗಿ ವೇಮನರು 15ನೇ ಶತಮಾನ ಕಂಡ ಅದ್ಭುತ ಶಾಸ್ತ್ರಜ್ಞರಾಗಿದ್ದವರು.ಸಮಾಜದಲ್ಲಿನಜಾತೀಯತೆ, ಅಸಮಾನತೆಯನ್ನು ಖಂಡಿಸಿದ ಮಹಾಯೋಗಿ ಎಂದು ಹೇಳಿದರು. ಕನ್ನಡಕ್ಕೆ ಸರ್ವಜ್ಞ, ತಮಿಳಿಗೆ ತಿರುವಳ್ವರ್ ಅವರಂತೆ ತೆಲುಗು ಭಾಷೆಗೆ ವೇಮನರೇ ಮಹಾಕವಿ ಎಂಬುದು ಇಂದಿಗೂ ಪ್ರಚಲಿತವಾಗಿದೆ ಎಂದರು.

ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಲತಾ ಮಾತಾನಾಡಿ ಬಡತನಕ್ಕೆ ಉಂಬುವ ಚಿಂತೆ, ಉಂಡರೆ ಉಡುವ ಚಿಂತೆ, ಎಂಬಂತೆ ಅಂಬಿಗರ ಚೌಡಯ್ಯ ಇವರು ರಚಿಸಿದ 15000 ವಚನಗಳ ಪೈಕಿ ಕೆಲವು ವಚನಗಳು ಮಾತ್ರ ಉಳಿದಿವೆ. ಹಾಗೂ ಮಹಾಯೋಗಿ ವೇಮನರ ಸಾಹಿತ್ಯ ಹಾಗೂ ಅವರ ಆದರ್ಶಗಳು ಇಂದಿಗೂ ಈ ಸಮಾಜಕ್ಕೆ ಅಗತ್ಯವಾಗಿದೆ. ಇವುಗಳನ್ನು ಉಳಿಸಿಕೊಳ್ಳುಕೊಂಡು ಅವರ ಆದರ್ಶಗಳನ್ನು ಪಾಲಿಸಿವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಕನ್ನಡ ಪ್ರಾಧ್ಯಾಪಕರಾದ ಸಾಲಿಮನಿ ಮಾರುತಿ ಉಪನ್ಯಾಸ ನೀಡಿದರು. ಪುಟಗನಾಳು ಗಂಗಾಮತಸ್ಥರ ಸಮಾಜ ಉಪಾಧ್ಯಕ್ಷರಾದ ಟಿ.ಮಂಜುನಾಥ, ಜಿಲ್ಲಾ ಗಂಗಾಮತಸ್ಥರ ಸಮಾಜ ನಿರ್ದೇಶಕರು ಅಂಜಿನಪ್ಪ.ಸಿ.ವಿ ಲೆಕ್ಕಾಪತ್ರಧಿಕಾರಿ ವೆಂಕಟೇಶ್, ರಶ್ಮಿಶಾಲೆಯ ಮುಖ್ಯೋಪಾಧ್ಯರು ಹಾಗೂ ಉಪಸ್ಥಿತರಿದ್ದರು.



**ಬೆಸ್ತರ ಸಮಾಜದ ಶೋಷಣೆಯಿಂದ ಮುಕ್ತರಾಗಬೇಕಾದರೆ ಸಂಘಟನೆ ಅತಿಮುಖ್ಯ**

# ಅಂಬಿಗರ ಚೌಡಯ್ಯ ಕೊಡುಗೆ ಸದಾ ಸ್ಮರಣೀಯ



» **ಚಳ್ಳಕೆರೆ**

ವಚನಗಳ ಮೂಲಕವೇ ಸಮಾಜದಲ್ಲಿ ಧಾರ್ಮಿಕ ಶಾಂತಿಯನ್ನು ಮೂಡಿಸಿದ ಅನೇಕ ಮಹಾನೀಯರಲ್ಲಿ ನಿಜಶರಣ ಅಂಬಿಕಗರ ಚೌಡಯ್ಯ ಸಹ ಪ್ರಮುಖರಾಗಿದ್ದಾರೆ. ಅಕ್ಷರ ಜ್ಞಾನವಿಲ್ಲದ ಜನಸಾಮಾನ್ಯರಿಗೆ ವಚನಗಳ ಮೂಲಕವೇ ಜ್ಞಾನದ ಧೀಕ್ಷೆ ನೀಡಿದ ಮಹಾನ್ ವ್ಯಕ್ತಿ ಅಂಬಿಗರ ಚೌಡಯ್ಯ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲ್ಲೂಕು ಬೆಸ್ತರ ಸಮಾಜದ ಹಮ್ಮಿಕೊಂಡಿದ್ದ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂದು ಬೆಸ್ತರ ಸಮಾಜ ಹಲವಾರು ವಿಫಲತೆಯ ನಡುವೆಯೂ ಸಹ ಉತ್ತಮ ಬದುಕು ಹಮ್ಮಿಕೊಳ್ಳುವಲ್ಲಿ ಸಾಕಷ್ಟು ಪ್ರಯತ್ನ ನಡೆಸುತ್ತಿದ್ದು, ಎಲ್ಲಾ ಕ್ಷೇತ್ರಗಳಲ್ಲೂ ಈ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯ ದೊರಕಬೇಕು. ಸಂಘಟನೆಯಿಂದ ಮಾತ್ರ ಇದು ಸಾಧ್ಯವಾಗಲಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ರಾಜ್ಯ ಸರ್ಕಾರ ಮಹಾನೀಯರ ಜಯಂತಿ ಆಚರಣೆಯ ಮೂಲಕ ಅವರು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸುವಂತಾಗಿದೆ. ರಾಜ್ಯದ ಶೋಷಿತ ಸಮುದಾಯಗಳಲ್ಲಿ ಬೆಸ್ತರ ಸಮುದಾಯವೂ ಸಹ ಒಂದಾಗಿದೆ. ಈ ಸಮುದಾಯದ ಸರ್ವತೋಮುಖ ಅಭಿವೃದ್ಧಿಗೆ ಸಮುದಾಯದ ಮುಖಂಡರು ಶ್ರಮಿಸಬೇಕು ಎಂದರು.

## ಜ.23ರಂದು ವಿದ್ಯುತ್ ವ್ಯತ್ಯಯ

**ಚಿತ್ರದುರ್ಗ:** ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿರುವ 220/66/11 ಕೆ.ವಿ ಚಿತ್ರದುರ್ಗ ವಿ.ವಿ. ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯಕ್ಕಾಗಿ ವಿ.ವಿ ಕೇಂದ್ರಕ್ಕೆ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಈ ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎಲ್ಲಾ ಎನ್.ಜೆ.ವೈ ಮತ್ತು ಕೃಷಿ 11 ಕೆ.ವಿ ಮಾರ್ಗಗಳಲ್ಲಿ ಇದೇ ಜನವರಿ 23ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಕಾಪರ್ ಮೇನ್ಸ್, ಕ್ಯಾದಿಗೆರೆ, ಜೆ.ಎನ್.ಕೋಟೆ, ಕಾಸವರಟ್ಟಿ, ಪಲ್ಲವಗೆರೆ, ಇಂಡಸ್ಟ್ರಿಯಲ್ ಏರಿಯಾ, ಕೋಟೆ, ಜಿಲ್ಲಾ ಪಂಚಾಯತ್, ಸಜ್ಜನಕೆರೆ, ದಂಡಿನಕುರುಬರಹಟ್ಟಿ, ಕೆನ್ನೆಡಲು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ಪ್ರಮುಖ ಸುದ್ದಿ**

# ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ಕಲಿಸಿ

» **ಚಿತ್ರದುರ್ಗ**

ಶಿಕ್ಷಕರು ಪಾಠ ಮಾಡಬೇಕು, ವಿದ್ಯಾರ್ಥಿಗಳು ಓದಬೇಕು, ಪೋಷಕರು ಅದನ್ನು ಸರಿಯಾದ ರೀತಿಯಲ್ಲಿ ಪರಿಶೀಲನೆ ಮಾಡಬೇಕು ಆಗ ಮಾತ್ರ ಒಂದು ಶಿಕ್ಷಣ ಸಂಸ್ಥೆ ಉತ್ತಮ ಸಂಸ್ಥೆಯಾಗಲು ಸಾಧ್ಯವಿದೆ ಎಂದು ಸಂಸದ ಜಿ.ಎಂ.ಸಿದ್ದೇಶ್ವರ ತಿಳಿಸಿದರು.

ನಗರದ ಅನುಭವ ಮಂಟಪದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ 35ನೇ ವರ್ಷದ ವಿಜಯೋತ್ಸವವನ್ನು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರವನ್ನು ಕಲಿಸಬೇಕಿದೆ. ಇಂದಿನ ದಿನಮಾನದಲ್ಲಿ ಅಂಕಗಳ ಜೊತೆಗೆ ಮೌಲ್ಯಯುತವಾದ ಸಂಸ್ಕಾರದ ಅಗತ್ಯ ಇದೆ. ಇಲ್ಲಿನ ಸಂಸ್ಥೆ ಇಂತಹ ಕಾರ್ಯಕ್ರಮಗಳನ್ನು ಮಕ್ಕಳಿಗೆ ಕಲಿಸುವುದರ ಮೂಲಕ ಸಂಸ್ಕಾರವಂತರನ್ನಾಗಿ ಮಾಡುತ್ತಿದೆ. ಒಂದು ಶಿಕ್ಷಣ ಸಂಸ್ಥೆಯ ಯಶಸ್ವಿಗೆ ಅಲ್ಲಿನ ಆಡಳಿತ ಮಂಡಲಿ, ಶಿಕ್ಷಕರು, ಮಕ್ಕಳು ಹಾಗೂ ಪೋಷಕರ ಪಾತ್ರ ಹೆಚ್ಚಿನದಾಗಿದೆ ಎಂದರು.

ಬಡತನದಲ್ಲಿ ಶಿಕ್ಷಣವನ್ನು ಪಡೆದ ಹಲವಾರು ಜನತೆ ಉನ್ನತ ಸ್ಥಾನವನ್ನು ಪಡೆದಿದ್ದಾರೆ, ಬಡತನದಲ್ಲಿ ಶಿಕ್ಷಣವನ್ನು ಪಡೆದಿರುವ ಇವರು ತಮ್ಮ ಮುಂದಿನ ಜೀವನದಲ್ಲಿ ಉನ್ನತವಾದ ಸ್ಥಾನಕ್ಕೆ ತಲುಪಿದ್ದಾರೆ. ಅಬ್ದುಲ್ ಕಲಂ, ಲಾಲ್ ಬಹದ್ದೂರ ಶಾಸ್ತ್ರಿ, ಸರ್ವಪಲ್ಲಿ ರಾಧಕೃಷ್ಣ ಸೇರಿದಂತೆ ಹಲವಾರು ಜನತೆ ಈ ರೀತಿಯಾದ ಸಾಧನೆಯನ್ನು ಮಾಡಿದ್ದಾರೆ. ಇವರೆಲ್ಲಾ ಬಡತನದಲ್ಲಿ ಶಿಕ್ಷಣವನ್ನು ಪಡೆದಿದ್ದಾರೆ. ಇಂದಿನ ನಮ್ಮ ಮೋದಿಯವರು ಸಹಾ ಕಡು ಬಡತನದಲ್ಲಿ ಇದ್ದು, ಈಗ ಉನ್ನತ ಸ್ಥಾನವನ್ನು ಪಡೆದಿದ್ದಾರೆ. ಕೋವಿಡ್ ಸಮಯದಲ್ಲಿ ದೇಶದ ಎಲ್ಲ ಜನತೆಗೂ ಸಹಾ ಉಚಿತವಾದ ಲಸಿಕೆಯನ್ನು ನೀಡುವುದರ ಮೂಲಕ ದೇಶದ ಜನತೆಯನ್ನು ಕೋವಿಡ್‌ನಿಂದ ಕಾಪಾಡಿದ್ದಾರೆ ಎಂದರು.

ಇಂದಿನ ಮಕ್ಕಳು ಮುಂದಿನ ದೇಶದ ಪ್ರಜೆಗಳು ಅವರನ್ನು ಸರಿಯಾದ ರೀತಿಯಲ್ಲಿ ತಯಾರು ಮಾಡುವುದು ಚಿಕ್ಕ ವಯಸ್ಸಿನಲ್ಲಿಯೇ ಆಗಬೇಕಿದೆ. ಆದ್ದರಿಂದ ಅವರಿಗೆ ಚಿಕ್ಕ ವಯಸ್ಸಿನಲ್ಲಿಯೇ ಸರಿಯಾದ ರೀತಿಯಲ್ಲಿ ಶಿಕ್ಷಣ ನೀಡುವುದರ ಮೂಲಕ ಅವರನ್ನು ದೇಶದ ಉತ್ತಮ ಪ್ರಜೆಗಳನ್ನಾಗಿ ಮಾಡುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಶಾಲೆಯಲ್ಲಿ ಅಧ್ಯಾಪಕರು ಮಕ್ಕಳಿಗೆ ಉತ್ತಮವಾಗಿ ಭೋಧನೆಯನ್ನು ಮಾಡುವುದರ ಮೂಲಕ ಮಕ್ಕಳನ್ನು ಸರಿದಾರಿಗೆ ತರುವ ಕೆಲಸವನ್ನು ಮಾಡಬೇಕಿದೆ. ತಂದೆ-ತಾಯಿಗಳು ಸಹಾ ಮಕ್ಕಳಲ್ಲಿ ಗುರಿಯನ್ನು ನೀಡುವುದರ ಮೂಲಕ ಅದನ್ನು ಸಾಧಿಸುವ ಹೊಣೆಯನ್ನು ನೀಡಬೇಕಿದೆ. ಮಕ್ಕಳಿಗೆ ಆಸ್ತಿಯನ್ನು ಮಾಡದೇ ಅವರನ್ನೇ ಆಸ್ತಿಯನ್ನಾಗಿ ಮಾಡಿ ಎಂದರು.ಮಕ್ಕಳಿಗೆ ನಮ್ಮ ರೀತಿಯಲ್ಲಿ ಹೊಡೆದು ಶಿಕ್ಷಣವನ್ನು ಕಲಿಸುವಂತಿಲ್ಲ, ಮಕ್ಕಳಿಗೆ ಹೊಡೆತವನ್ನು ನೀಡದೆ ಶಿಕ್ಷಣವನ್ನು ಕಲಿಸಬೇಕಿದೆ ಅವರನ್ನು ಪ್ರೀತಿ, ವಿಶ್ವಾಸದಿಂದ ಭೋಧನೆಯನ್ನು ನೀಡುವುದರ ಮೂಲಕ ಶಿಕ್ಷಣವನ್ನು ಕಲಿಸಬೇಕಿದೆ. ಶಿಕ್ಷಕರ ಕೆಲಸ ಜವಾಬ್ದಾರಿಯುತವಾಗಿದೆ. ಅದನ್ನು ಸರಿಯಾದ ರೀತಿಯಲ್ಲಿ ನಿಭಾಯಿಸಬೇಕಿದೆ. ಆಗ ಮಾತ್ರ ಉತ್ತಮವಾದ ಮಕ್ಕಳು ನಿರ್ಮಾಣವಾಗಲು ಸಾಧ್ಯವಿದೆ. ಕಲ್ಲನ್ನು ಯಾವ ರೀತಿ ಶಿಲ್ಪಿಯ ಕೈಯಲ್ಲಿ ಶಿಲೆಯನ್ನಾಗುತ್ತದೆಯೂ ಅದೇ ರೀತಿ ಶಿಕ್ಷಕರ ಕೈಯಲ್ಲಿ ಮಕ್ಕಳು ಉತ್ತಮವಾದ ವಿದ್ಯಾವಂತನಾಗಿ ಹೊರ ಹೊಮ್ಮಬೇಕಿದೆ ಇದರ ಹೊಣೆಗಾರಿಕೆ ನಿಮ್ಮ ಮೇಲಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಮಾತನಾಡಿ, ಕಳೆದ 35 ವರ್ಷಗಳಿಂದ ವಿಜಯಕುಮಾರ್ ರವರು ಉತ್ತಮವಾದ ಶಿಕ್ಷಣವನ್ನು ನೀಡುವುದರ ಮೂಲಕ ಉತ್ತಮವಾದ ಪ್ರಜೆಗಳನ್ನು ರೂಪಿಸಿದ್ದಾರೆ. ಇದರಿಂದ ನಗರದಲ್ಲಿ ಇವರ ಶಾಲೆ ನಂ 1 ಆಗಿದೆ. ಶಾಲೆಯಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಇತರೆ ಚಟುವಟಿಕೆಗಳನ್ನು ಮಾಡುವುದರ ಮೂಲಕ ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಲಾಗುತ್ತಿದೆ. ದೇಶದಲ್ಲಿ ಪ್ರಧಾನ ಮಂತ್ರಿಗಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುವುದರ ಮೂಲಕ ಶಿಕ್ಷಣಕ್ಕೆ ಅಗ್ರವಾದ ಸ್ಥಾನವನ್ನು ನೀಡಿದ್ದಾರೆ. ಶಿಕ್ಷಣದ ಜೊತೆಗೆ ಇತರೆ ಚಟುವಟಿಕೆಗಳನ್ನು ಮಾಡುವುದರ ಮೂಲಕ ಅವರನ್ನು ಉತ್ತಮ ಪ್ರಜೆಗಳನ್ನಾಗಿ ನಿರ್ಮಾಣ ಮಾಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ವಿಜಯಕುಮಾರ್ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭ ಮಾಡುವುದರ ಮೂಲಕ ನಗರಕ್ಕೆ ಉತ್ತಮವಾದ ಕೊಡುಗೆಯನ್ನು ನೀಡಿದ್ದಾರೆ. 35 ವರ್ಷದಲ್ಲಿ ಲಕ್ಷಾಂತರ ಮಕ್ಕಳನ್ನು ವಿದ್ಯಾವಂತರನ್ನಾಗಿ ನಿರ್ಮಾಣ ಮಾಡುವುದರ ಮೂಲಕ ದೇಶಕ್ಕೆ ಉತ್ತಮವಾದ ಪ್ರಜೆಗಳನ್ನು ನೀಡಿದ್ದಾರೆ. ನಾನು ಸಹಾ ಹಲವಾರು ಬಾರಿ ಈ ಶಾಲೆಯಲ್ಲಿ ಸೀಟು ಕೊಡಿಸುವ ಸಲುವಾಗಿ ದೂರವಾಣಿಯ ಮೂಲಕ ಸಂಪರ್ಕ ಮಾಡುವುದರ ಮೂಲಕ ಬಡವರಿಗೆ ಸೀಟನ್ನು ಕೊಡಿಸಿದ್ದೇನೆ ಇದೆ ರೀತಿ ವಿಜಯ ಕುಮಾರ್ ಸಹಾ ನಮ್ಮ ಮಾತನ್ನು ಮೀರದೆ ಸೀಟನ್ನು ನೀಡಿದ್ದಾರೆ. ಮಕ್ಕಳಲ್ಲಿ ಬುದ್ದಿವಂತಿಕೆ ಇದೆ ಅದನ್ನು ಹೊರವ ತೆಗೆಯುವ ಕಾರ್ಯವನ್ನು ಮಾಡಬೇಕಿದೆ ಎಂದರು.

ನಮ್ಮದೇಶದಮಕ್ಕಳುಬುದ್ದಿವಂತಿರಿದ್ದಾರೆ ಇವರ ಬುದ್ದಿವಂತಿಕೆಯನ್ನು ನೋಡಿ ಹೊರ ದೇಶದವರು ನಮ್ಮ ದೇಶದ ಮಕ್ಕಳ ಕಲಿಕೆಗೆ ಹೆಚ್ಚಿನ ಒತ್ತು ನೀಡುವಂತೆ ಅಲ್ಲಿನ ಪ್ರಧಾನ ಮಂತ್ರಿಗಳಿಗೆ ಮನವಿ ಮಾಡಿದ್ದಾರೆ. ಇದು ನಮ್ಮ ದೇಶದ ಮಕ್ಕಳ ಗತ್ತು. ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿಯೇ ಕ್ರೀಡೆಯ ಬಗ್ಗೆ ಹೆಚ್ಚಿನ ಒತ್ತು ನೀಡುವುದರ ಮೂಲಕ ಅವರನ್ನು ಉತ್ತಮ ಕ್ರೀಡಾಪಟುಗಳನ್ನಾಗಿಹಿ ರೂಪಿಸಬೇಕಿದೆ.



# ರೈತರು ಸಾಲದ ಅಸಲು ಕಟ್ಟಿದ್ದರೆ ಸಂಪೂರ್ಣ ಬಡ್ಡಿ ಮನ್ನಾ: ರಾಜ್ಯ ಸರ್ಕಾರದಿಂದ ಅಧಿಕೃತ ಆದೇಶ

» **ನಮ್ಮ ಜನ ಸಮಾಚಾರ**

ಬೆಂಗಳೂರು : ರಾಜ್ಯದ ಸಹಕಾರ ಸಂಸ್ಥೆ ಮೂಲಕ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಅಸಲು ಪಾವತಿಸಿದಲ್ಲಿ ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ಬಗ್ಗೆ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶದಲ್ಲಿ, ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ರಾಜ್ಯದಲ್ಲಿ ಉದ್ಭವಿಸಿರುವ ಅನಾವೃಷ್ಟಿಗಳ ಹಿನ್ನೆಲೆಯಲ್ಲಿ ರಾಜ್ಯದ ರೈತರು ಸಹಕಾರ ಸಂಸ್ಥೆಗಳಿಂದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲ ಪಡೆದು ಸಾಲ ಮರುಪಾವತಿಸಲು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವುದನ್ನು ಮತ್ತು ಇದರಿಂದ ಸಹಕಾರ ಸಂಸ್ಥೆಗಳು ನಬಾರ್ಡ್ ನಿಂದ ಪಡೆದ ಸಾಲವನ್ನು ಮರುಪಾವತಿಸಲು ಸಾಧ್ಯವಾಗದೇ ಪುನಃ ರೈತರಿಗೆ ಸಾಲ ನೀಡಲು ತೊಂದರೆಯಾಗುತ್ತಿರುವುದನ್ನು ಮನಗಂಡು ಇಂತಹ ಸುಸ್ತಿದಾರರಾದ ರೈತರನ್ನು ಋಣಮುಕ್ತರನ್ನಾಗಿ ಮಾಡಿ ಮುಂದಿನ ತಮ್ಮ ಕೃಷಿ ಚಟುವಟಿಕೆಗಳಿಗೆ ಸಾಲ ಪಡೆದು ಅರ್ಹತೆ ಗಳಿಸಲು ಸರ್ಕಾರವು ಯೋಜನ ರೂಪಿಸುವುದು ಅತ್ಯವಶ್ಯಕವಾಗಿರುತ್ತದೆ.

## ಷರತ್ತುಗಳು

ಈ ಸೌಲಭ್ಯವು ರೈತರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಂದ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. ಈ ಯೋಜನೆ ಕೃಷಿಯೇತರ ಸಾಲಗಳಿಗೆ ಅನ್ವಯವಾಗುವುದಿಲ್ಲ ಮತ್ತು ಮೇಲೆ ತಿಳಿಸಿರುವ ಸಂಸ್ಥೆಗಳನ್ನು ಹೊರತುಪಡಿಸಿ ಇತರೆ ಸಹಕಾರ ಸಂಸ್ಥೆಗಳಲ್ಲಿ ಪಡೆದ ಸಾಲಗಳಿಗೆ ಅನ್ವಯಿಸುವುದಿಲ್ಲ. ನಬಾರ್ಡ್ ಗುರುತಿಸಿದ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳಿಗೆ ಅಂದರೆ ಲಘು ನೀರಾವರಿ, ಭೂ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ ಉದ್ದೇಶಗಳಿಗೆ ಮಾತ್ರ ಈ ಯೋಜನೆ ಅನ್ವಯವಾಗುತ್ತದೆ. ಮುಂದುವರೆದು, ರಾಜ್ಯ ಸರ್ಕಾರದ ಬಡ್ಡಿ ರಿಯಾಯತಿ ಬದ್ಧತೆಯಡಿ ವಿತರಿಸಿರುವ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ.ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಂದ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಅಸಲನ್ನು ದಿನಾಂಕ:29.02.2024 ರೊಳಗೆ ಸಂಬಂಧಪಟ್ಟ ಸಂಸ್ಥೆಗಳಿಗೆ ಸಾಲ ಪಡೆದ ರೈತರು ಮರುಪಾವತಿ ಮಾಡಿದಲ್ಲಿ ಸದರಿ ಸಾಲಗಳ ಮೇಲಿನ ಮರುಪಾವತಿ ದಿನಾಂಕದವರೆಗಿನ ಬಡ್ಡಿಯನ್ನು ಮನ್ನಾ ಮಾಡಿ ಸಂಬಂಧಪಟ್ಟ ಸಹಕಾರಿ ಸಂಸ್ಥೆಗಳಿಗೆ ಸರ್ಕಾರ ಭರಣ ಮಾಡುವುದು. ಈ ಯೋಜನೆಯು ಮಾರಿಟೋರಿಯಂ ಅವಧಿಯಲ್ಲಿ ಸುಸ್ತಿಯಾಗಿರುವ ಬಡ್ಡಿಗೂ ಸಹ ಅನ್ವಯವಾಗುತ್ತದೆ.

ಮೇಲೆ ಓದಲಾದ (2) ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಸಹಕಾರ ಸಂಸ್ಥೆಗಳ ಮೂಲಕ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲಗಳನ್ನು ಪಡೆದು ದಿನಾಂಕ:31.12.2023ರ ಅಂತ್ಯಕ್ಕೆ ಸಹಕಾರ ಸಂಸ್ಥೆಗಳಿಗೆ 56,879 ರೈತರಿಂದ ರೂ. 58,515.96 ಲಕ್ಷಗಳ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲಗಳು ಸುಸ್ತಿಯಾಗಿದ್ದು, ಇದರ ಮೇಲಿನ ಬಡ್ಡಿ, ಬಾಬು ರೂ. 44,020.50 ಲಕ್ಷಗಳಾಗಿರುತ್ತವ ಎಂದು ತಿಳಿಸಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರೈತರು ರಾಜ್ಯದ ಸಹಕಾರ ಸಂಘಗಳು ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಂದ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ, ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳ ಅಸಲನ್ನು ದಿನಾಂಕ:29.02.2024 ರೊಳಗೆ ಸಂಬಂಧಪಟ್ಟ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಪೂರ್ತಿಯಾಗಿ ಮರುಪಾವತಿಸಿದಲ್ಲಿ ಈ ಮೊತ್ತಕ್ಕೆ ಬಾಕಿ ಇರುವ ಬಡ್ಡಿಯನ್ನು ಮನ್ನಾ ಮಾಡಲು ಮತ್ತು ಈ ರೀತಿ ಮನ್ನಾ ಮಾಡಿದ ಬಡ್ಡಿ ಮೊಬಲಗನ್ನು ಸಹಕಾರ ಸಂಘಗಳಿಗೆ ಸರ್ಕಾರವು ಭರ್ತಿ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

# ಕೊಬ್ಬರಿ ಬೆಳೆಗೆ ಕ್ವಿಂಟಾಲಿಗೆ 1500 ರೂ: ಸಿಎಂ

» **ನಮ್ಮ ಜನ ಸಮಾಚಾರ**

ತುಮಕೂರು: ರಾಜ್ಯ ಸರ್ಕಾರದಿಂದ ಕೊಬ್ಬರಿ ಬೆಳೆಗಾರರಿಗೆ ಕೇಂದ್ರ ಸರ್ಕಾರ ನೀಡುವ ಕನಿಷ್ಠ ಬೆಂಬಲ ಬೆಲೆ 12000 ರೂ.ಗಳೊಂದಿಗೆ 1500 ರೂ. ಗಳನ್ನು ಹೆಚ್ಚುವರಿಯಾಗಿ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಸಿದ್ದಗಂಗಾ ಮಠ ಕ್ಯಾತ್ಸಂದ್ರ ಕಾರ್ಯಕ್ರಮ ಮುಗಿದ ನಂತರ ಮಾಧ್ಯಮದರೊಂದಿಗೆ ಮಾತನಾಡಿದರು.

ಒಟ್ಟು ನಮ್ಮ ಸರ್ಕಾರದಿಂದ ಕ್ವಿಂಟಾಲಿಗೆ 1500 ರೂ.ಗಳನ್ನು ಒದಗಿಸಲಾಗುವುದು. 3000 ರೂ.ಗಳಿಗೆ ಬೇಡಿಕೆ ಇದ್ದರೂ ಸರ್ಕಾರದ ತನ್ನ ಶಕ್ತ್ಯಾನುಸಾರ ಬೆಂಬಲ ಬೆಲೆ ನೀಡುತ್ತಿದ್ದು, ಎಂ.ಎಸ್.ಪಿ ದರ ನಿಗದಿ ಮಾಡುವುದು ಕೇಂದ್ರ ಸರ್ಕಾರ ಎಂದರು. ಕೇಂದ್ರ ಸರ್ಕಾರ ನಿಗದಿ ಮಾಡಿರುವುದಕ್ಕಿಂತ ರಾಜ್ಯ ಸರ್ಕಾರ ಕೊಬ್ಬರಿ ಬೆಳೆಗಾರರಿಗೆ 1500 ಹೆಚ್ಚಾಗಿ ನೀಡಲಿದೆ ಎಂದರು.



**ಅಯೋಧ್ಯೆಯಲ್ಲಿ ರಾಮಮಂದಿರ ಪ್ರಾಣಪ್ರತಿಷ್ಠಾಪನೆಗೆ ರಜೆ ಇಲ್ಲ:** ಅಯೋಧ್ಯೆಯಲ್ಲಿ ರಾಮಮಂದಿರ ಪ್ರಾಣಪ್ರತಿಷ್ಠಾಪನೆ ಅಂಗವಾಗಿ ನಾಳೆ ರಜೆ ಘೋಷಣೆ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

**ವಿಚಾರ ಮಾಡಲಾಗುವುದು:** ಹಿಂದಿನ ಸರ್ಕಾರ ಜನವರಿ 21 ನ್ನು ದಾಸೋಹ ದಿನ ಎಂದು ಆಚರಿಸಲು ಘೋಷಣೆ ಮಾಡಿದ್ದರ ಕುರಿತು ಮಾತನಾಡಿದ ಮುಖ್ಯಮಂತ್ರಿಗಳು ಯಾವಾಗ ಮಾಡಿದರು, ಯಾವ ಸಂದರ್ಭದಲ್ಲಿ ಹಾಗೂ ಯಾಕಾಗಿ ಮಾಡಿದರು ಎಂದು ನನಗೆ ತಿಳಿದಿಲ್ಲ , ವಿಚಾರ ಮಾಡಲಾಗುವುದು ಎಂದರು.

**ವಿಶೇಷ ಪೂಜೆ:** ಜ.22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಪ್ರಾಣಪ್ರತಿಷ್ಠಾಪನೆಯಾಗುತ್ತಿದ್ದು ಮುಜರಾಯಿ ಇಲಾಖೆ ವತಿಯಿಂದ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ರಾಮ ದೇವಸ್ಥಾನವನ್ನು ನಾಳೆ ಉದ್ಘಾಟಿಸುತ್ತಿರುವುದಾಗಿ ತಿಳಿಸಿದರು.

**ನಿಷೇಧ ಇಲ್ಲ:** ತಮಿಳುನಾಡಿನಲ್ಲಿ ಅಯೋಧ್ಯೆಯ ರಾಮಮಂದಿರ ಪ್ರಾಣಪ್ರತಿಷ್ಠಾಪನೆಯ ನೇರಪ್ರಸಾರವನ್ನು ನಿಷೇಧ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ತಮಿಳುನಾಡಿನ ಬಗ್ಗೆ ನಾನು ಯಾಕೆ ಮಾತನಾಡಲಿ. ಇಲ್ಲಿ ಹಾಗೆ ಮಾಡುವುದಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

**ಕುಣಿಗಲ್ ಸ್ಟಡ್ ಫಾರಂ ಸ್ಥಳಾಂತರ ಕ್ಕೆ ಸಲಹೆ:** ಟಿಪ್ಪು ಸುಲ್ತಾನರ ಕಾಲದ ಕುಣಿಗಲ್ ಸ್ಟಡ್ ಫಾರಂನ್ನು ಸರ್ಕಾರ ಮುಚ್ಚುತ್ತಿದೆ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ ಬೆಂಗಳೂರಿನ ಹೃದಯ ಭಾಗದಲ್ಲಿ ರೇಸ್ ಕೋರ್ಸ್ ಇದ್ದು, ಅಲ್ಲಿಗೆ ಸ್ಥಳಾಂತರ ಮಾಡಿ ಎಂದು ಸಲಹೆ ನೀಡಿದ್ದೇನೆ ಎಂದು ತಿಳಿಸಿದರು. ಕುಣಿಗಲ್ ನಲ್ಲಿ 400 ಏಕರೆಯಷ್ಟು ಜಮೀನು ಇದ್ದು, ಇಲ್ಲಿ 80 ಏಕರೆ ಯಷ್ಟಿದೆ. ಅಲ್ಲಿ ಸ್ಥಳ ನೀಡುವುದಾಗಿ ಹೇಳಿದ್ದೇನೆ ಎಂದರು.

ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್ ಅವರು ಅಲ್ಲಿ ಇಂಟಿ ಗ್ರೇಟೆಡ್ ಟೌ ನ್ ಶಿಪ್ ಪ್ರಾರಂಭಿಸುವ ಬಗ್ಗೆ ಟ್ವೀಟ್ ಮಾಡಿದ್ದಾರೆ ಎಂಬ ಬಗ್ಗೆ ಅವರನ್ನೇ ಕೇಳಿ ಎಂದು ಮುಖ್ಯಮಂತ್ರಿಗಳು ಹೇಳಿದರು.



**ಚಳ್ಳಕೆರೆ ನಗರದ ರೋಟರಿ ಬಾಲಭವನದಲ್ಲಿ ಹಮ್ಮಿಕೊಂಡಿದ್ದ ಉಚಿತ ಮೊಣಕಾಲು ಬದಲಿ ಶಸ್ತ್ರಚಿಕಿತ್ಸಾ ತಪಾಸಣಾ ಶಿಬಿರವನ್ನು ಹಿರಿಯ ರೋಟೇರಿಯನ್ ಡಾ.ಕೆ.ಎಂ. ಜಯಕುಮಾರ್ ಉದ್ಘಾಟಿಸಿದರು.**

# ಅಂಬಿಗರ ಚೌಡಯ್ಯ ಮಹಾನ್ ಶಿವಭಕ್ತ: ಶಾಸಕ ಚಂದ್ರಪ್ಪ



» **ಹೊಳಲ್ಕೆರೆ**

ಅಂಬಿಗರ ಚೌಡಯ್ಯ ಮಹಾನ್ ಶಿವಭಕ್ತ. ಸಮಾಜಕ್ಕೆ ಬೆಳಕಾಗುವ ಕೆಲಸ ಮಾಡಿದ್ದಾರೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಭಾನುವಾರ ನಡೆದ ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದರು.ಅಂಬಿಗ ಜನಾಂಗಕ್ಕೆ ದೊಡ್ಡ ಇತಿಹಾಸವಿದೆ. ನೀವುಗಳೆಲ್ಲಾ ಸಂಘಟಿತರಾಗಿ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಮಹಾಭಾರತ ಕಥೆ ಆರಂಭಗೊಂಡಿದ್ದೆ ನಿಮ್ಮ ಜನಾಂಗದಿಂದ ಎಂತಹ ಸಂದರ್ಭ ಎದುರಾದರೂ ಎದೆಗುಂದದೆ ಪರೋಪಕಾರಿಯಾಗಿ ಬದುಕಿದವರು. ಸೂರ್ಯ ಚಂದ್ರ ಇರುವತನಕ ಶಾಶ್ವತವಾಗಿ ಹೆಸರಿರುತ್ತದೆ ಎಂದು ಶ್ಲಾಘಿಸಿದರು.

ಬಸ್ಸು, ರೈಲು ಯಾವುದೇ ಸಾರಿಗೆ ವ್ಯವಸ್ಥೆಯಿಲ್ಲದ ಕಾಲದಲ್ಲಿ ದೋಣಿಗಳ ಮೂಲಕ ಜನರನ್ನು ಒಂದು ಕಡೆಯಿಂದ ಮತ್ತೊಂದೆಡೆ ಸಾಗಿಸುತ್ತಿದ್ದ ಅಂಬಿಗ ಜನಾಂಗ ಪ್ರಾಣ ಉಳಿಸುವ ಕೆಲಸ ಮಾಡಿದೆ. ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣವಂತರನ್ನಾಗಿ ಮಾಡಿ ಸರ್ಕಾರದ ಸೌಲತ್ತುಗಳ ಪ್ರಯೋಜನ ಪಡೆದುಕೊಂಡು ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಬಲಿಷ್ಠರಾಗಿ ನಿಮ್ಮ ಜನಾಂಗಕ್ಕಿರುವ ಇತಿಹಾಸವನ್ನು ಉಳಿಸಿಕೊಳ್ಳಿ ಎಂದು ತಿಳಿಸಿದರು.

ಹೊಳಲ್ಕೆರೆ ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ಅಂಬಿಗರ ಚೌಡಯ್ಯ ಸಂಘದ ಅಧ್ಯಕ್ಷ ರಮೇಶಣ್ಣ, ಕುಬೇರಪ್ಪ, ಸಮಾಜದ ಮುಖಂಡರುಗಳು, ವಿವಿಧ ಇಲಾಖೆ ಅಧಿಕಾರಿಗಳು ಅಂಬಿಗರ ಚೌಡಯ್ಯ ಜಯಂತಿಯಲ್ಲಿ ಪಾಲ್ಗೊಂಡಿದ್ದರು. ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯಲ್ಲಿ ಶಾಸಕ ಡಾ.ಎಂ.ಚಂದ್ರಪ್ಪ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

## ಫಾಸ್ಟ್ ನ್ಯೂಸ್



**ನಾಯಕನಹಟ್ಟಿ ಸಮೀಪದ ಮಲ್ಲೂರಹಳ್ಳಿ ಗ್ರಾಮದ ಸಹ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ಚಿತ್ರದುರ್ಗ ತಾಲ್ಲೂಕಿನ ಮುದ್ದಾಪುರ ಗ್ರಾಮದವರಾದ ಶ್ರೀಮತಿ ಜಿ.ಎಸ್. ವಿಜಯಲಕ್ಷ್ಮೀ ಯೋಗೇಶ್ ಇವರಿಗೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಪ್ರಗತಿಪರ ಶಿಕ್ಷಕರ ವೇದಿಕೆ ಚಳ್ಳಕೆರೆ ನಗರದ ಶ್ರೀ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಮಾತೆ ಸಾವಿತ್ರಿಬಾಯಿ ಪುಲೆ ಜಯಂತೋತ್ಸವದ ಪ್ರಯುಕ್ತ ಅಕ್ಷರ ಸಿರಿ ಪ್ರಶಸ್ತಿಯನ್ನು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿಯವರಿಂದ ಹಾಗೂ ಸಂಘದ ಪಧಾಧಿಕಾರಿಗಳಿಂದ ಸನ್ಮಾನಿಸಲಾಯಿತು.**

### ಬೆಲಗೂರು: ಆಸ್ತಿ ವಿಚಾರಕ್ಕೆ ಪ್ರಾರಂಭವಾದ ಸಹೋದರರ ಜಗಳ ಕೊಲೆಯಲ್ಲಿ ಅಂತ್ಯ

» **ಹೊಸದುರ್ಗ**

ಜೋತೆಗೆ ಬೆಳೆದು ಜೋತೆಗೆ ಆಟವಾಡಿ ವಯಸ್ಸಿಗೆ ಬರುವವರಗೂ ಅಣ್ಣತಮ್ಮಂದಿರು!ಆದರೆ ಬೆಳೆಯುತ್ತಾ ಬೆಳೆಯುತ್ತಾ ದೊಡ್ಡವರಾದಾಗ ಸ್ವಂತ ಅಣ್ಣತಮ್ಮಂದಿರೆ ದಾಯಾದಿಗಳು ಎನ್ನುವ ಹಿರಿಯರ ಮಾತು ಸುಳ್ಳಲ್ಲಾ.ಆಸ್ತಿ ವಿಚಾರಕ್ಕೆ ಪ್ರಾರಂಭವಾದ ಸಹೋದರರಿಬ್ಬರ ನಡುವಿನ ಜಗಳ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಹೊಸದುರ್ಗ ತಾಲೂಕಿನ ಶ್ರೀರಾಂಪುರ ಹೋಬಳಿ ಬೆಲಗೂರು ಗ್ರಾಮದಲ್ಲಿ ಶುಕ್ರವಾರ ತಡರಾತ್ರಿ ನಡೆದಿದೆ.ಕೊಲೆಯಾದ ವ್ಯಕ್ತಿಯನ್ನು ಬೆಲಗೂರು ಗ್ರಾಮದ ಸಿದ್ದೇಶ್ (36) ಎಂದು ತಿಳಿದು ಬಂದಿದು ಈ ಘಟನೆ ಇಡೀ ಗ್ರಾಮವನ್ನೇ ಬೆಚ್ಚಿ ಬೀಳಿಸಿದೆ. ಆಸ್ತಿ ವಿಚಾರವಾಗಿ ಅಣ್ಣ ತಮ್ಮಂದಿರ ನಡುವೆ ಶುಕ್ರವಾರ ರಾತ್ರಿ ಜಗಳ ಪ್ರಾರಂಭವಾಗಿದೆ. ಮಾತಿಗೆ ಮಾತು ಬೆಳದು ಕೈ ಕೈ ಮಿಲಾಯಿಸುವ ಮಟ್ಟಿಗೆ ಹೋಗಿ ಕೊನೆಯಲ್ಲಿ ಸಿಟ್ಟಿಗೆದ್ದ ಅಣ್ಣ ತಮ್ಮನನ್ನೇ ಕೊಲೆ ಮಾಡಿದ್ದಾನೆ. ಅಣ್ಣ ತಮ್ಮಂದಿರು ಬೇರೆ ಬೇರೆ ಮನೆಯಲ್ಲಿ ವಾಸವಿದ್ದರು. ಆಸ್ತಿ ವಿಚಾರವಾಗಿ ಅಣ್ಣ ಸತೀಶ್ ಮನೆಗೆ ಬಂದಿದ್ದ ಸಿದ್ದೇಶ್ ಜಗಳ ತೆಗೆದಿದ್ದಾನೆ.ಈ ಸಂರ್ಬದಲ್ಲಿ ಜಗಳ ವಿಕೋಪಕ್ಕೆ ತಿರುಗಿದಾಗ ಅಣ್ಣ ಮರದ ರೀಪರ್‌ನಿಂದ ತಮ್ಮ ಸಿದ್ದೇಶ್ ತಲೆಗೆ ಹೊಡೆದಿದ್ದಾನೆ. ಗಂಭೀರವಾಗಿ ಗಾಯಗೊಂಡ ಸಿದ್ದೇಶ್ ಆಸ್ಪತ್ರೆಯಲ್ಲಿ ಶನಿವಾರ ಮುಂಜಾನೆ ಮೃತಪಟ್ಟಿದ್ದಾನೆ. ಸ್ಥಳಕ್ಕೆ ಸಿಪಿಐ ಮಧು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಈ ಬಗ್ಗೆ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

### ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗೆ ಶಾಸಕರಿಗೆ ಮನವಿ



» **ಹೊಸದುರ್ಗ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹೊಸದುರ್ಗ ತಾಲ್ಲೂಕು ಘಟಕದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಶಾಸಕ ಬಿ ಜಿ ಗೋವಿಂದಪ್ಪ ಅವರಿಗೆ ಶನಿವಾರ ಮಾನವಿ ಸಲ್ಲಿಸಿದರು.ಎಳನೇ ವೇತನ ಆಯೋಗದಿಂದ ಶೀಘ್ರ ವರದಿ ಪಡೆದು ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸುವುದು. ಹಳೇ ಪಿಂಚಣಿ ಯೋಜನೆ ಮರುಜಾರಿಗೊಳಿಸುವುದು, ಸಂಜೀವಿನಿ ಯೋಜನೆ ಅನುಷ್ಠಾನಗೊಳಿಸಬೇಕು. ಸರ್ಕಾರ ಶೀಘ್ರವೇ ನಮ್ಮ ಮನವಿ ಸ್ವೀಕರಿಸಿ, ಆದೇಶ ಹೊರಡಿಸಲಿ ಎಂದು ಸರ್ಕಾರಿ ನೌಕರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಆರ್. ಗಂಗಾಧರ್ ತಿಳಿಸಿದರು. ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ಬಿ.ಜಿ. ಗೋವಿಂದಪ್ಪ ನೌಕರರ ಬೇಡಿಕೆಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವೆ. ಮನವಿ ಪತ್ರವನ್ನು ಮುಖ್ಯಮಂತ್ರಿಗಳಿಗೆ ತಲುಪಿಸಿ, ಬೇಡಿಕೆ ಈಡೇರಿಸಲು ಒತ್ತಾಯಿಸುವುದಾಗಿ ಭರವಸೆ ನೀಡಿದರು.ರಾಜ್ಯ ಪರಿಷತ್ ಸದಸ್ಯ ಶಶಿಧರ್ , ಗೌರವಾಧ್ಯಕ್ಷ ಜಯಣ್ಣ, ರಾಜ್ಯ ಸಹಕಾರ್ಯದರ್ಶಿ ಆರ್. ಲಕ್ಕಯ್ಯ, ಶಾಂತಪ್ಪ, ಖಜಾಂಚಿ ನಾಗರಾಜ್, ಪ್ರಾ.ಶಾ.ಶಿ ಸಂಘದ ಅಧ್ಯಕ್ಷ ಮಂಜುನಾಥ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್, ಎನ್.ಪಿ.ಎಸ್. ತಾಲ್ಲೂಕು ಅಧ್ಯಕ್ಷ ಪ್ರಶಾಂತ್ ಸೇರಿದಂತೆ ಸಂಘದ ಪದಾಧಿಕಾರಿಗಳು ಇದ್ದರು.

## ಪ್ರಮುಖ ಸುದ್ದಿ

### ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಎನ್.ಡಿ.ಪಿ.ಎಸ್ ಕಾಯ್ದೆ ಕುರಿತು ಕಾರ್ಯಾಗಾರ

# ಎನ್‌ಡಿಪಿಎಸ್ ಕಾಯ್ದೆಯಡಿಯಲ್ಲಿ ಸೂಕ್ಷ್ಮವಾಗಿ ಕಾರ್ಯನಿರ್ವಹಿಸಿ

» **ಚಿತ್ರದುರ್ಗ**

ಎನ್.ಡಿ.ಪಿ.ಎಸ್ ಕಾಯ್ದೆಯಡಿಯಲ್ಲಿ ತನಿಖಾಧಿಕಾರಿಗಳು ತುಂಬಾ ಸೂಕ್ಷ್ಮವಾಗಿ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಭಾನುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಅಬಕಾರಿ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಎನ್.ಡಿ.ಪಿ.ಎಸ್.ಕಾಯ್ದೆ ಕುರಿತು ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಉಪನ್ಯಾಸ ನೀಡಿದರು.

ದೇಶದ ಮುಂದಿನ ಪ್ರಜೆಗಳಾದ ಮಕ್ಕಳು ಹಾಗೂ ಯುವ ಸಮಾಜ ಮಾದಕ ವ್ಯಸನಗಳಿಗೆ ತುತ್ತಾಗುವುದನ್ನು ತಡೆಗಟ್ಟಿ, ನಾವುಗಳು ವ್ಯಸನಮುಕ್ತ ಸಮಾಜ ನಿರ್ಮಾಣ ಮಾಡಬೇಕು. ಉತ್ತಮ ಸಮಾಜ ನಿರ್ಮಾಣದ ಜೊತೆಗೆ ಅತ್ಯುತ್ತಮ ದೇಶವಾಗಬೇಕು ಎಂದು ಸದುದ್ದೇಶದಿಂದ ಎನ್‌ಡಿಪಿಎಸ್ ಕಾಯ್ದೆ ಜಾರಿಗೆ ತರಲಾಗಿದೆ ಎಂದರು.




ಪ್ರಸ್ತುತ ದಿನಗಳಲ್ಲಿ ಡಿಜಿಟಲ್ ಯುಗವಾಗಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ಬಂದ ತಕ್ಷಣ ಕಾರ್ಯಪ್ರವೃತ್ತರಾಗಬೇಕು. ಎನ್‌ಡಿಪಿಎಸ್ ಕಾಯ್ದೆಯಡಿಯಲ್ಲಿ ಪ್ರತಿಯೊಂದು ಇಲಾಖೆಯು ಸಹ ಸಹಾಯ, ಸಹಕಾರ ನೀಡಬೇಕು. ಯಾವುದೇ ಕಾರಣಕ್ಕೆ ವಿಳಂಬ ಮಾಡಬಾರದು. ಆದಷ್ಟು ವಿಳಂಬ ಕಡಿಮೆ ಮಾಡಬೇಕು ಎಂದು ಹೇಳಿದರು.

1985ರಲ್ಲಿ ಎನ್‌ಡಿಪಿಎಸ್ ಕಾಯ್ದೆ ಪ್ರಾರಂಭ ಮಾಡಲಾಯಿತು. ಕಾಯ್ದೆ ಬರುವ ಸಂದರ್ಭದಲ್ಲಿ ಅಂದರೆ 1985ನೇ ಸಾಲಿನಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚಾಯಿತು. ಅಂದಿನ ಯುವ ಜನತೆ ಗಾಂಜಾ ಸೇರಿದಂತೆ ವಿವಿಧ ಮಾದಕ ವಸ್ತುಗಳಿಗೆ ದಾಸರಾಗಿದ್ದರು. ಆಗಷ್ಟೇ ಮೆಡಿಕಲ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳು ಪ್ರಾರಂಭವಾಗಿದ್ದವು. ಇವುಗಳು ಪ್ರಾರಂಭದ ಸಂದರ್ಭದಲ್ಲಿ ಬೇರೆ ಬೇರೆ ಜಿಲ್ಲೆ, ತಾಲ್ಲೂಕು, ರಾಜ್ಯಗಳಿಂದ ಆಗಮಿಸಿ, ಹಾಸ್ಟೆಲ್, ಪಿಜಿನಲ್ಲಿರುವ ವ್ಯವಸ್ಥೆ ಪ್ರಾರಂಭವಾಯಿತ ಎಂದರು.

ಹದಿಹರೆಯ ವಿದ್ಯಾರ್ಥಿಗಳಿಗೆ ಯಾವುದೇ ಸರಿ, ತಪ್ಪು ಎಂಬ ತಿಳುವಳಿಕೆ ಇಲ್ಲದೇ ಇರುವ ಸಂದರ್ಭದಲ್ಲಿ ಬಹಳ ಬೇಗ ಗಾಂಜಾ ಸೇರಿದಂತೆ ಇತರೆ ಮಾದಕ ವ್ಯಸನಗಳಿಗೆ ತುತ್ತಾಗುವ ಸಂದರ್ಭ ಹೆಚ್ಚಾಗಿ ಇತ್ತು. ಹಾಗಾಗಿ ಇದನ್ನು ಗಮನಿಸಿ, ಎನ್‌ಡಿಪಿಎಸ್ ಕಾಯ್ದೆಯನ್ನು ವಿಶೇಷವಾಗಿ ಜಾರಿಗೆ ತರಲಾಯಿತು. 1988ರಲ್ಲಿ, 2010 ಹಾಗೂ 2014ರಲ್ಲಿ ಹೀಗೆ ಮೂರು ಬಾರಿ ಈ ಕಾಯ್ದೆಯು ತಿದ್ದುಪಡಿಯಾಗಿದೆ. ತಿದ್ದುಪಡಿಯಾದ ನಂತರವೂ ಹಾಗೂ ಪ್ರಾರಂಭದಿಂದಲೂ ಎನ್‌ಡಿಪಿಎಸ್ ಕಾಯ್ದೆಯಲ್ಲಿ ವಿಶೇಷ ಅಧಿಕಾರಗಳನ್ನು ತನಿಖಾಧಿಕಾರಿಗಳಿಗೆ ನೀಡಲಾಗಿದೆ ಎಂದು ಹೇಳಿದರು.

ಎನ್‌ಡಿಪಿಎಸ್ ಕಾಯ್ದೆಯ ಅಧ್ಯಾಯ-5 ಸೆಕ್ಷನ್ 41 ರಿಂದ 68 ರವರೆಗೆ ಇದೆ. ಇದರಲ್ಲಿ ಸೆಕ್ಷನ್ 41 ರಿಂದ 44, 50, 58, 52, 52 (ಎ), 57, 57 (ಎ) ಈ ಸೆಕ್ಷನ್‌ಗಳು ಅತ್ಯಂತ ಪ್ರಮುಖವಾದ ಸೆಕ್ಷನ್‌ಗಳಾಗಿವೆ ಎಂದು ತಿಳಿಸಿದ ಅವರು, ಪೊಲೀಸ್ ಅಧಿಕಾರಿಗಳಿಗೆ ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ತನಿಖೆ ಮಾಡುವ ಅವಕಾಶ ನೀಡಲಾಗಿದ್ದು, ನಮ್ಮ ಸಮಾಜವನ್ನು ನಾವು ಸರಿಯಾದ ಮಾರ್ಗದಲ್ಲಿ ನಡೆಸಬೇಕು ಎಂದು ಹೇಳಿದರು.

ಪ್ರಧಾನಹಿರಿಯಸಿವಿಲ್‌ನ್ಯಾಯಾಧೀಶರು ಹಾಗೂ ಸಿಜೆಎಂ ಕೆಂಪರಾಜು ಅವರು ಕರ್ನಾಟಕ ರಾಜ್ಯ ಅಬಕಾರಿ ಕಾಯ್ದೆ 1965 ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಅಬಕಾರಿ ಉಪ ಆಯುಕ್ತ ಡಾ.ಬಿ.ಮಾದೇಶ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಬೆಂಗಳೂರು ಮಹಾದೇವಪುರ ಅಬಕಾರಿ ನಿರೀಕ್ಷಕ ಅಬುಬಕರ್ ಮುಜಾವರ್ ಸೇರಿದಂತೆ ಜಿಲ್ಲೆಯ ಅಬಕಾರಿ ಇಲಾಖೆ ಅಧಿಕಾರಿಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T